# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 166 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 15–01–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 166 | Title- Code: KARKAN 28269 | Chitradurga | Date: 15-01-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಅಪರಾಧ ನಿರ್ಣಯದಲ್ಲಿ ಪರಿಣಾಮಕಾರಿ ತನಿಖೆಯ ಪಾತ್ರ ಮಹತ್ವದ್ದು: ನ್ಯಾ.ಪ್ರದೀಪ್ 2

ಕನ್ನಡ ನಾಡು–ನುಡಿ ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯ:ಎಚ್.ಆಂಜನೇಯ 3

ಸಂಕ್ರಾಂತಿ ವಿಶೇಷ 4



ಸುದ್ದಿ, ಜಾಹಿರಾತಿಗೆ 9686622252





## ಫಾಸ್ಟ್ ನ್ಯೂಸ್

### ಗ್ರಾಪಂ ಬಿಲ್ ಕಲೆಕ್ಟರ್ ಲೋಕಯುಕ್ತ ಬಲೆಗೆ

» **ಚಿತ್ರದುರ್ಗ**



ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನ ಹೊಸ ಯಳನಾಡು ಗ್ರಾಪಂಬಿಲ್ ಕಲೆಕ್ಟರ್ ಆನಂದ್ ಲಂಚ ಸ್ವೀಕರಿಸುವಾಗ ಗ್ರಾ.ಪಂ ಬಿಲ್ ಕಲೆಕ್ಟರ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾನೆ. ಇಂದಿರಾ ಅವಾಸ್ ಮನೆ ಬಿಲ್ ಮಾಡಲು 30 ಸಾವಿರ ಹಣಕ್ಕೆ ಬೇಡಿಕೆ ಇಟ್ಟಿದ್ದು ಆಲೂರು ಗ್ರಾಮದ ಪಾಂಡು ರಂಗಪ್ಪಗೆ ಲಂಚಕ್ಕೆ ಬೇಡಿಕೆ ಇಟ್ಟಿದ್ದು ಆನಂದ್ ನಿವಾಸದಲ್ಲಿ 25000 ಲಂಚ ಪಡೆವಾಗ ಲೋಕಾಯುಕ್ತ ರೇಡ್ ಮಾಡಿದ್ದಾರೆ. ಲೊಕಾಯುಕ್ತ ಮೃಂತ್ಯುಂಜಯ ನೇತೃತ್ವದಲ್ಲಿ ದಾಳಿ ನಡೆಸಿದ್ದಾರೆ.

### ಕೃಷಿ ಸಂವಾದ ನಡೆಸದ ರೈತ ದಿನಾಚರಣೆ; ರಮೇಶ್ ಆಪಾದನೆ

» **ಹಿರಿಯೂರು**

ನಗರದಲ್ಲಿ ನಡೆದ ರಾಷ್ಟ್ರೀಯ ರೈತ ದಿನಾಚರಣೆಯ ಕಾರ್ಯಕ್ರಮದಲ್ಲಿ ರೈತರು ಮತ್ತು ರೈತಮಹಿಳೆಯರನ್ನು ಕೃಷಿವಿಜ್ಞಾನಿಗಳೊಂದಿಗೆ ಸಂವಾದ ನಡೆಸುತ್ತೇವೆ ಎಂದು ಹೇಳಿ, ಕರೆತಂದು, ಆಹ್ವಾನ ಪತ್ರಿಕೆಯಲ್ಲಿ ಇಲ್ಲದೆ ಇರುವ ರಾಜಕಾರಣಿಗಳನ್ನು ವೇದಿಕೆಯ ಮೇಲೆ ಕುಳ್ಳಿರಿಸಿ ಹಾಗೂ ಯಾವುದೇ ಸಂವಾದ ನಡೆಸದೆ ಸಭೆ ನಡೆಸಲಾಯಿತು ಎಂಬುದಾಗಿ ರೈತಹೋರಾಟಗಾರ ಹಾಗೂ ವಾಣಿವಿಲಾಸಸಾಗರ ಅಚ್ಚುಕಟ್ಟುಪ್ರದೇಶದ ರೈತಹಿತರಕ್ಷಣಾ ಸಮಿತಿ ಅಧ್ಯಕ್ಷ ಕಸವನಹಳ್ಳಿ ರಮೇಶ್ ಆರೋಪಿಸಿದ್ದಾರೆ.ನಗರದ ಕೃಷಿಇಲಾಖೆಯ ಕೃಷಿ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ರೈತದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಇಂತಹ ಅವ್ಯವಸ್ಥೆ ನಡೆದಿದ್ದು, ಸುಮಾರು 11 ಗಂಟೆಗೆ ಸಭೆ ಎಂಬುದಾಗಿ ರೈತರನ್ನು ಕರೆಸಿ, ಸುಮಾರು 12–30 ಕಳೆದರೂ ಸಭೆ ಪ್ರಾರಂಭವಾಗಲಿಲ್ಲ, ಆನಂತರ 1 ಗಂಟೆಗೆ ಸಚಿವರು ಬಂದು ಸಭೆ ಪ್ರಾರಂಭವಾದರೂ ಸುಮಾರು ಮದ್ಯಾಹ್ನ 2 ಗಂಟೆ ಸಮಯಕ್ಕೆ ಬರೀ ರಾಜಕಾರಣಿಗಳ ಭಾಷಣದಲ್ಲೇ ಸಭೆ ಮುಕ್ತಾಯಗೊಂಡಿತು ಆಪಾದಿಸಿದ್ದಾರೆ.

## ಬಿಜೆಪಿ ಜಿಲ್ಲಾ ಅಧ್ಯಕ್ಷರಾಗಿ ಪುನರಾಯ್ಕೆ

# ಕೋಟೆ ನಾಡಿಗೆ ಮುರುಳಿ ಬಿಜೆಪಿ ಸಾರಥಿ

» **ಚಿತ್ರದುರ್ಗ**

ಕೋಟೆ ನಾಡು ಚಿತ್ರದುರ್ಗ ಜಿಲ್ಲೆಯ ಬಿಜೆಪಿ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ತೀವ್ರ ಪೈಪೋಟಿ ಏರ್ಪಟ್ಟಿತ್ತು.ಆದರೆ ಹಾಲಿ ಚಿತ್ರದುರ್ಗ ಜಿಲ್ಲಾ ಬಿಜೆಪಿ ಜಿಲ್ಲಾ ಅಧ್ಯಕ್ಷ ಎ. ಮುರುಳಿ ಅವರು ಚಿತ್ರದುರ್ಗದ ಬಿಜೆಪಿ ಜಿಲ್ಲಾ ಅಧ್ಯಕ್ಷರಾಗಿ ಪುನರಾಯ್ಕೆ ಆಗುವ ಮೂಲಕ ಅಚ್ಚರಿ ಮೂಡಿಸಿದ್ದಾರೆ.

ಚಿತ್ರದುರ್ಗ ಜಿಲ್ಲಾ ಘಟಕದ ಆಯ್ಕೆಗೆ ಹೊಸದುರ್ಗದ ಲಿಂಗಮೂರ್ತಿ, ಸಿದ್ದಾಪುರ ಸುರೇಶ್ , ಮಲ್ಲಿಕಾರ್ಜುನ್ ಮೂವರ ಜೊತೆ ವೆಂಕಟೇಶ್ ಯಾದವ್ ಅವರು ಸಹ ಹಿಂದುಳಿದ ವರ್ಗಗಳ ಕೋಟಾದಲ್ಲಿ ಲಾಭಿ ನಡೆಸಿದ್ದರು. ಆದರೆ ಬಿಜೆಪಿ ರಾಜ್ಯಧ್ಯಕ್ಷರಾಗಿ ಅಧಿಕಾರಿ ವಹಿಸಿಕೊಂಡ. ದಿನದಿಂದ ರಾಜ್ಯದಾದ್ಯಂತ ಪ್ರವಾಸ ಮಾಡುತ್ತಿರುವ ಬಿ.ವೈ.ವಿಜಯೇಂದ್ರ ಅವರು ರಾಜ್ಯದಲ್ಲಿ ಹಲವು ಬದಲಾವಣೆಗೆ ಮಣೆ ಹಾಕಿದ್ದರು. ಅದರಂತೆ ಸಹ ಕೋಟೆ ನಾಡಿನಲ್ಲಿ ನೂತನ ಜಿಲ್ಲಾಧ್ಯಕ್ಷರು ಯಾರು ಆಗುತ್ತಾರೆ ಎಂಬ ಚರ್ಚೆ ಮತ್ತು ಊಹೆ ಪ್ರಾರಂಭವಾಗಿದ್ದವು ಮತ್ತು ಜಿಲ್ಲಾ ಬಿಜೆಪಿ ಅಧ್ಯಕ್ಷ ಸ್ಥಾನಕ್ಕೆ ಭಾರೀ ಲಾಭಿಯು ನಡೆದಿತ್ತು.ಆದರೆ ರಾಜ್ಯಧ್ಯಕ್ಷ ವಿಜಯೇಂದ್ರ ಅವರು ಜಿಲ್ಲಾ ಅಧ್ಯಕ್ಷ ಸ್ಥಾನದ ಆಯ್ಕೆಗೆ ಪೈಪೋಟಿ ನಡುವೆ ಎ. ಮುರುಳಿ ಅವರನ್ನು ಪುನರ್ ಆಯ್ಕೆ ಮಾಡಿ ರಾಜ್ಯಧ್ಯಕ್ಷರು ಆದೇಶ ಹೊರಡಿಸಿ ಪಟ್ಟಿ ರಿಲೀಸ್ ಮಾಡಿದ್ದಾರೆ.



ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ ಅವರಿಗೆ ಈ ಹಿಂದೆ ಜಿಲ್ಲಾ ಘಟಕದ ಹಾಲಿ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತಿದ್ದರು. ಮುರುಳಿ ಅವರು ಮೂಲತಃ ಹಿಂದುಳಿದ ಬುಡಕಟ್ಟು ಗೊಲ್ಲ ಸಮುದಾಯದಿಂದ ಬಂದಿರುವ ಹಿರಿಯೂರು ತಾಲೂಕಿನ ಆಲಮರದ ಹಟ್ಟಿ ಗ್ರಾಮದವರಾಗಿದ್ದಾರೆ. ಸಂಘ ಪರಿವಾರ ಮೂಲದಿಂದ ಬಂದು ಬಿಜೆಪಿ ಪಕ್ಷದಲ್ಲಿ ತೊಡಗಿಕೊಳ್ಳುವ ಮೂಲಕ ಇಂದು ಚಿತ್ರದುರ್ಗ ಜಿಲ್ಲೆಯ ಎರಡನೇ ಬಾರಿಗೆ ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆಯಾಗುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ.

**ಲೋಕಸಭೆ ಎಫೆಕ್ಟ್** : ಲೋಕಸಭೆ ದೃಷ್ಟಿಯಿಂದ ಹಿಂದುಳಿದ ವರ್ಗಗಳು ಮತ್ತು ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ನಿರ್ಣಾಯಕ ಮತಗಳನ್ನು ಹೊಂದಿರುವ ಯಾದವ ಸಮುದಾಯದ ವಿಶ್ವಾಸ ಗಳಿಸಲು ಮತ್ತೊಮ್ಮೆ ಮುರುಳಿ ಅವರ ಆಯ್ಕೆ ಮಾಡಲಾಗಿದೆ ಎಂದು ರಾಜಕೀಯ ವಲಯದಲ್ಲಿ ಮಾತುಗಳು ಕೇಳಿ ಬರುತ್ತಿದೆ. ಕಳೆದ ಬಿಜೆಪಿ ಸರ್ಕಾರ ಇದ್ದಂತಹ ಸಂದರ್ಭದಲ್ಲಿ ಉತ್ತಮವಾಗಿ ಪಕ್ಷ ಸಂಘಟನೆ ಮಾಡಿರುವ ಜೊತೆ ಸಮುದಾಯದ ಕಾರ್ಡ್ ವರ್ಕ್ ಆಗಿದ್ದು ಮತ್ತೊಮ್ಮೆ ಮುರುಳಿ ಅವರಿಗೆ ಜಿಲ್ಲಾಧ್ಯಕ್ಷ ಸ್ಥಾನ ಒಲಿದಿದೆ ಎಂದು ಹೇಳಲಾಗುತ್ತಿದೆ.

## ನಗರದೆಲ್ಲೆಡೆ ಮಕರ ಸಂಕ್ರಾಂತಿ ಹಬ್ಬದ ಸಡಗರ:

# ಎಳ್ಳು, ಬೆಲ್ಲ ಖರೀದಿಸಲು ಜೋರು



» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಸಹ ಮಕರಸಂಕ್ರಾಂತಿ ಹಬ್ಬವನ್ನು ಸಂಭ್ರಮ, ಸಡಗರಗಳಿಂದ ಆಚರಿಸಲು ಗೃಹಿಣಿಯರು ಕಳೆದ ಎರಡ್ಮೂರು ದಿನಗಳಿಂದ ಸಿದ್ದತೆಗಳನ್ನು ನಡೆಸುತ್ತಿದ್ಧಾರೆ. ನಗರದ ಮಾರುಕಟ್ಟೆಯಲ್ಲಿ ಕಬ್ಬು, ಬಣ್ಣ, ಎಳ್ಳು, ಬೆಲ್ಲ ಮುಂತಾದವುಗಳ ಖರೀದಿಗೆ ಅಂಗಡಿಗಳ ಮುಂದೆ ಮುಗಿಬಿದಿದ್ಧಾರೆ.

ನಗರದ ಎಲ್ಲಾ ಪ್ರಮುಖ ರಸ್ತೆಗಳಲ್ಲೂ ಗ್ರಾಮೀಣ ಭಾಗದಿಂದ ಬಂದ ಕಬ್ಬಿನ ವ್ಯಾಪಾರಿಗಳು ಕಬ್ಬಿನ ವ್ಯಾಪಾರದಲ್ಲಿ ತೊಡಗಿದ್ದಾರೆ. ಹಬಶೋಷಿತ ಸಮಾಜದ ಸರ್ವತೋಮುಖ ಅಭಿವೃದ್ದಿಗೆ ರಾಜ್ಯಮಟ್ಟದ ಸಮಾವೇಶ ಜ.28ರಂದು. ಒಂದು ದಿನ ಬಾಕಿ ಇರುವಂತೆಯೇ ಕಬ್ಬಿನ ಬೆಲೆ 50ರಿಂದ80ರೂ ವರೆಗೂ ಏರಿದೆ. ಈ ಬಾರಿ ಎಳ್ಳು, ಬೆಲ್ಲ ಹಾಗೂ ಬಣ್ಣಗಳಲ್ಲೂ ಸಹ ಧರ ಏರುಪೇರಾಗಿದ್ದು, ಗ್ರಾಹಕರು ದರಗಳನ್ನು ಲೆಕ್ಕಸದೆ ಖರೀದಿಯಲ್ಲಿ ನಿರತರಾಗಿದ್ಧಾರೆ.

## ಸಂಭ್ರಮದಿಂದ ಜರುಗಿದ ಆರತಿಬಾನೋತ್ಸವ



» **ಹೊಸದುರ್ಗ**

ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮದ ಪ್ರಸಿದ್ಧ ಶ್ರೀ ಆಂಜನೇಯಸ್ವಾಮಿಯವರ ಸನ್ನಿದಿಯಲ್ಲಿ ದೇವಪುರ ಗ್ರಾಮದೇವತೆಯಾದ ಶ್ರೀ ಕೆರೆಯಾಗಳಮ್ಮ ದೇವರ ಆರತಿಬಾನೋತ್ಸವವು ಶನಿವಾರ ರಾತ್ರಿ ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಭವ್ಯ ರೀತಿಯಲ್ಲಿ ಜರುಗಿತು.

ಪ್ರಸಿದ್ಧ ಶ್ರೀ ಸೋಮದೇವರ ಕುಣಿತವನ್ನು ಕಿಕ್ಕಿರಿದು ಸೇರಿದ್ದ ಸಹಸ್ರಾರು ಭಕ್ತಾಧಿಗಳು ಕುತೂಹಲದಿಂದ ವೀಕ್ಷಿಸಿ ದೇವರ ದರ್ಶನ ಮತ್ತು ಆಶೀರ್ವಾದ ಪಡೆದರು.ಆರತಿ ಉತ್ಸವದಲ್ಲಿ ನೂರಾರು ಸುಮಂಗಳೆಯರು ರಾತ್ರಿಯಿಂದ ಮುಂಜಾನೆಯವರೆಗೂ ಆರತಿಹೋತ್ತು ದೇವರಿಗೆ ಸೇವೆಯನ್ನು ಸಲ್ಲಿಸಿದರು. ರಾತ್ರಿಯಿಡಿ ಕುಟ್ಟಿ ಹದ ಮಾಡಿದ್ದ ನವಣಕ್ಕಿ ಪುಡಿ ಮತ್ತು ಬೆಲ್ಲದ ಮಿಶ್ರಣವನ್ನು ಜೋಡಿ ಒನಕೆಯಿಂದ ಒಳಕಲ್ಲಿನಲ್ಲಿ ಹೆಣ್ಣು ಮಕ್ಕಳು ಹಾಗೂ ಸುಮಂಗಲೆಯರು ಕುಟ್ಟಿ ತಯಾರಿಸಿದ ತಂಬಿಟ್ಟಿನ ಬುಟ್ಟಿಯನ್ನು ತಮ್ಮ ತಲೆಯ ಮೇಲೆ ಹೋತ್ತು ಚೌಕಾಕಾರದ ಮತ್ತು ದುಂಡನೆಯ ಆರತಿಯ ಮೇಲೆ ತುಪ್ಪದ ದೀಪವನ್ನು ಹಚ್ಚಿ ಶ್ರೀ ಆಂಜನೇಯಸ್ವಾಮಿ ಮತ್ತು ಶ್ರೀ ಕೆರೆಯಾಗಳಮ್ಮ ದೇವಿಯವರಿಗೆ ಬೆಳಗಲಾಯಿತು.ಈ ದೇವರುಗಳನ್ನು ಸಹಾ ವಿಶೇಷವಾಗಿ ಅಲಂಕರಿಸಲಾಗಿದ್ದ ಮುತ್ತಿನ ಪಲ್ಲಕ್ಕಿಯಲ್ಲಿ ಕೂರಿಸಿ ಗ್ರಾಮಸ್ಥರು ಮತ್ತು ಭಕ್ತಸಮೂಹದವರು ಪೂಜೆ ಸಲ್ಲಿಸಿದರು.


ಪುಟ 2




# ಮಕರ ಸಂಕ್ರಾಂತಿಗೆ ಖಿಚಡಿ ಏಕೆ?

ಹೊಸ ವರ್ಷದಲ್ಲಿ ಮೊದಲು ಬರುವ ಹಬ್ಬ ಸಂಕ್ರಾಂತಿ. ಹಿಂದೂ ಧರ್ಮದಲ್ಲಿ ಮಕರ ಸಂಕ್ರಾಂತಿ ಸಾಕಷ್ಟು ವಿಶೇಷತೆಯನ್ನು ಹೊಂದಿದೆ. ಮಕರ ಸಂಕ್ರಾಂತಿ ನಂತ್ರ ಶುಭ ಕಾರ್ಯಗಳು ಶುರುವಾಗುತ್ತವೆ. ಮಕರ ಸಂಕ್ರಾಂತಿನ್ನು ಉತ್ತರಾಯಣ ಕಾಲ ಎಂದೂ ಕರೆಯುತ್ತಾರೆ. ಸೂರ್ಯ ಧನು ರಾಶಿಯಿಂದ ಹೊರಬಂದು ಮಕರ ರಾಶಿಯನ್ನು ಈ ಸಮಯದಲ್ಲಿ ಪ್ರವೇಶಿಸುತ್ತಾನೆ.

ಸೂರ್ಯ ಮಕರ ರಾಶಿಗೆ ಪ್ರವೇಶ ಮಾಡುವುದರಿಂದಲೇ ಅದನ್ನು ಮಕರ ಸಂಕ್ರಾಂತಿ ಎಂದು ಕರೆಯಲಾಗುತ್ತದೆ. ಮಕರ ಸಂಕ್ರಾಂತಿ ಸೂರ್ಯನಿಗೆ ಮೀಸಲಿಡಲಾಗಿದೆ. ಈ ದಿನ ಸೂರ್ಯದೇವರ ಪೂಜೆ, ಆರಾಧನೆ ನಡೆಯುತ್ತದೆ. ಪವಿತ್ರ ನದಿಯಲ್ಲಿ ಸ್ನಾನ, ಸೂರ್ಯನಿಗೆ ಅರ್ಘ್ಯ ಹಾಗೂ ದಾನ ಮಕರ ಸಂಕ್ರಾಂತಿಯ ವಿಶೇಷ. ಮಕರ ಸಂಕ್ರಾಂತಿಯನ್ನು ಬೇರೆ ಬೇರೆ ಹೆಸರುಗಳಿಂದ ಮತ್ತು ಪದ್ಧತಿಯಿಂದ ಆಚರಿಸಲಾಗುತ್ತದೆ.ಮಕರ ಸಂಕ್ರಾಂತಿ ಹಬ್ಬದಲ್ಲಿ ಎಳ್ಳು, ಬೆಲ್ಲದ ಜೊತೆ ಖಿಚಡಿ ಬೇಯಿಸುವ ಪದ್ಧತಿ ಇದೆ. ಬಹುತೇಕ ಎಲ್ಲ ಭಾಗಗಳಲ್ಲಿ ಖಿಚಡಿ ತಯಾರಿಸಿ, ಅದನ್ನು ತಿನ್ನುವುದಲ್ಲದೆ ದಾನ ಮಾಡುತ್ತಾರೆ. ನಾವಿಂದು ಸಂಕ್ರಾಂತಿ ದಿನ ಏಕೆ ಖಿಚಡಿ ತಯಾರಿಸಬೇಕು ಎನ್ನುವ ಬಗ್ಗೆ ನಿಮಗೆ ಮಾಹಿತಿ ನೀಡ್ತೇವೆ.

**ಮಕರ ಸಂಕ್ರಾಂತಿಯಂದು ಖಿಚಡಿ ಏಕೆ?:** ಮಕರ ಸಂಕ್ರಾಂತಿ ಹಬ್ಬದಂದು ಖಿಚಡಿ ಮಾಡುವ ಕಾರಣ ಅದನ್ನು ಕೆಲವು ಕಡೆ ಖಿಚಡಿ ಹಬ್ಬ ಎಂದೇ ಕರೆಯುತ್ತಾರೆ. ಖಿಚಡಿ ಸಾಮಾನ್ಯ ಆಹಾರವಲ್ಲ. ಇದು ಗ್ರಹಗಳ ಜೊತೆ ಸಂಬಂಧವನ್ನು ಹೊಂದಿದೆ. ಬೇಳೆಕಾಳುಗಳು, ಅಕ್ಕಿ, ತುಪ್ಪ, ಅರಿಶಿನ, ಮಸಾಲೆಗಳು ಮತ್ತು ಹಸಿರು ತರಕಾರಿಗಳ ಮಿಶ್ರಣದಿಂದ ಖಿಚಡಿ ಮಾಡಲಾಗುತ್ತದೆ. ಎಲ್ಲವೂ ಒಂಬತ್ತು ಗ್ರಹಗಳಿಗೆ ಸಂಬಂಧಿಸಿದೆ ಎಂದು ನಂಬಲಾಗಿದೆ. ಸಂಕ್ರಾಂತಿ ದಿನ ಖಿಚಡಿ ಸೇವನೆ ಶುಭ ಫಲಿತಾಂಶ ನೀಡುತ್ತದೆ ಎಂಬ ನಂಬಿಕೆಯೂ ಇದೆ.

ಖಿಚಡಿಯಲ್ಲಿನ ಬಳಸುವ ಅಕ್ಕಿಯನ್ನು ಚಂದ್ರನಿಗೆ, ಉಪ್ಪು ಶುಕ್ರನಿಗೆ, ಅರಿಶಿನವನ್ನು ಗುರುವಿಗೆ, ಹಸಿರು ತರಕಾರಿಗಳನ್ನು ಬುಧನಿಗೆ ಮತ್ತು ಖಿಚಡಿಯ ಶಾಖವನು ಮಂಗಳನಿಗೆ ಹೋಲಿಸಲಾಗುತ್ತದೆ. ಖಿಚಡಿಯಲ್ಲಿ ಕಪ್ಪು ಉದ್ದಿನಬೇಳೆ ಮತ್ತು ಎಳ್ಳನ್ನು ಬಳಸಲಾಗುತ್ತದೆ. ಇದು ಸೂರ್ಯ ಮತ್ತು ಶನಿ ಜೊತೆ ಸಂಬಂಧ ಹೊಂದಿದೆ.

**ಖಿಚಡಿ ಹಾಗೂ ಅದ್ರ ಹಿಂದಿರುವ ಕಥೆ :** ಮಕರ ಸಂಕ್ರಾಂತಿಯಂದು ಖಿಚಡಿ ತಯಾರಿಸುವ ಪದ್ಧತಿ ಈಗಿನದ್ದಲ್ಲ. ಅನೇಕಾನೇಕ ವರ್ಷಗಳಿಂದಲೂ ಇದು ರೂಢಿಯಲ್ಲಿದೆ. ಬಾಬಾ ಗೋರಖನಾಥ್ ಮತ್ತು ಅಲಾವುದ್ದೀನ್ ಖಿಲ್ಜಿಯೊಂದಿಗೆ ಖಿಚಡಿ ಕಥೆ ಥಳುಕು ಹಾಕಿಕೊಂಡಿದೆ. ಬಾಬಾ ಗೋರಖನಾಥ್ ಮತ್ತು ಅವರ ಶಿಷ್ಯರು ಅಲಾವುದ್ದೀನ್ ಖಿಲ್ಜಿ ಮತ್ತು ಅವನ ಸೈನ್ಯದ ವಿರುದ್ಧ ಸಾಕಷ್ಟು ಹೋರಾಡಿದರು. ಹೋರಾಟ ಮಾಡಿ ಬಾಬಾ ಗೋರಖನಾಥ್ ಹಾಗೂ ಅವರ ಸೈನಿಕರು ಶಕ್ತಿ ಕಳೆದುಕೊಂಡಿದ್ದರು. ಅವರಿಗೆ ಅಡುಗೆ ಮಾಡಲು ಹೆಚ್ಚಿನ ಸಮಯ ಸಿಗುತ್ತಿರಲಿಲ್ಲ. ಶಕ್ತಿ ನೀಡುವ ಹಾಗೂ ಬೇಗ ಆಹಾರ ತಯಾರಿಸುವಂತಹ ಅಡುಗೆಯನ್ನು ಅವರು ಆವಿಷ್ಕರಿಸಿದರು.

ಬಾಬಾ ಗೋರಖನಾಥ್ ಬೇಳೆಕಾಳುಗಳು, ಅಕ್ಕಿ ಮತ್ತು ತರಕಾರಿಗಳನ್ನು ಬೆರೆಸಿ ಖಾದ್ಯವನ್ನು ತಯಾರಿಸಿದರು. ಅದಕ್ಕೆ ಖಿಚಡಿ ಎಂದು ಹೆಸರಿಸಲಾಯಿತು. ಕಡಿಮೆ ಸಮಯದಲ್ಲಿ ಸೀಮಿತ ಪದಾರ್ಥಗಳು ಮತ್ತು ಕಡಿಮೆ ಶ್ರಮದಲ್ಲಿ ತಯಾರಿಸಬಹುದಾದ ಭಕ್ಷ್ಯವಾಗಿತ್ತು. ಇದು ಯೋಧರಿಗೆ ದೈಹಿಕ ಶಕ್ತಿಯನ್ನು ನೀಡಿತ್ತು.

ಖಿಲ್ಜಿ ಭಾರತ ಬಿಟ್ಟಾಗ ಗೋರಖನಾಥ್, ಪ್ರಸಾದದ ರೂಪದಲ್ಲಿ ಖಿಲ್ಜಿಯನ್ನು ನೀಡಿದ್ದರು. ಇದರ ನಂತರ ಪ್ರತಿ ವರ್ಷ ಮಕರ ಸಂಕ್ರಾಂತಿಯಂದು ಖಿಚಡಿಯನ್ನು ತಯಾರಿಸುತ್ತ ಬರಲಾಗಿದೆ. ಅಈ ಖಿಚಡಿಯನ್ನೇ ಬಾಬಾ ಗೋರಖನಾಥನಿಗೆ ಅರ್ಪಿಸಲಾಗುತ್ತದೆ. ನಂತ್ರ ಅದನ್ನು ಪ್ರಸಾದದ ರೀತಿಯಲ್ಲಿ ಅರ್ಪಿಸಲಾಗುತ್ತದೆ ಮತ್ತು ದಾನದ ರೂಪದಲ್ಲಿ ನೀಡಲಾಗುತ್ತದೆ.

## ಫಾಸ್ಟ್ ನ್ಯೂಸ್

### ಕೆ.ಆರ್.ಮಂಜುನಾಥ್‌ಗೆ ಪಿಹೆಚ್‌ಡಿ ಪದವಿ

» ಚಿತ್ರದುರ್ಗ



ದಾವಣಗೆರೆ ತಾಲ್ಲೂಕಿನ ಕುರ್ಕಿ ಗ್ರಾಮದ ವಾಸಿಯಾದ ಕೆ. ರೇವಣಸಿದ್ದಾಚಾರಿ ಹಾಗೂ ಶಶಿಕಲಾ ದಂಪತಿಗಳ ಮಗನಾದ ಕೆ.ಆರ್. ಮಂಜುನಾಥ ಇವರು ಹಂಪಿ ಕನ್ನಡ ವಿಶ್ವವಿದ್ಯಾಲಯದ ಶಾಸನಶಾಸ್ತ್ರ ವಿಭಾಗದಲ್ಲಿ ಡಾಕ್ಟರೇಟ್ ಪದವಿಗೆ ಭಾಜನರಾಗಿದ್ದಾರೆ. ಹಂಪಿ ಕನ್ನಡ ವಿಶ್ವವಿದ್ಯಾಲಯದ ಬುಡಕಟ್ಟು ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಡಾ.ಎ.ಎಸ್.ಪ್ರಭಾಕರ ಇವರ ಮಾರ್ಗದರ್ಶನದಲ್ಲಿ "ಕಲ್ಯಾಣ ಚಾಲುಕ್ಯರ ಆಡಳಿತದಲ್ಲಿ ಮಾಂಡಳಿಕರು" ಎಂಬ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿ ದೊರೆತಿದೆ. ಕನ್ನಡ ವಿಶ್ವವಿದ್ಯಾಲಯದ 32ನೇ ಘಟಿಕೋತ್ಸವದಲ್ಲಿ ಕುಲಪತಿಗಳಾದ ಡಾ.ಡಿ.ವಿ. ಪರಮಶಿವಮೂರ್ತಿ, ಕುಲಸಚಿವರಾದ ಡಾ. ವಿಜಯ್ ಪೂಣಚ್ಚ ತಂಬಂಡ, ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಪದವಿ ಪ್ರಧಾನ ಮಾಡಿದ್ದಾರೆ.

### ಮಣಿಕಂಠಗೆ ಪಿಹೆಚ್‌ಡಿ

» ಚಿತ್ರದುರ್ಗ



ಹೊಳಲ್ಕೆರೆ ತಾಲ್ಲೂಕಿನ ಮದ್ದೇರು ಪಂಚಾಯಿತಿಯ ಹಳೇಹಳ್ಳಿ ಕಣಿವೆ ಗ್ರಾಮದ ನಿವಾಸಿಗಳಾದ ದಿ.ಬಸವರಾಜಪ್ಪ, ದೇವಮ್ಮ ಎಂಬ ಬಡ ದಂಪತಿಗಳ ಮಗನಾದ ಬಿ.ಮಣಿಕಂಠ ಅವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯವು ಪಿಹೆಚ್‌ಡಿ ಪದವಿ ನೀಡಿದೆ. ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕರಾದ ಡಾ. ಗಂಗಾಧರ ದೈವಜ್ಞ ಇವರ ಮಾರ್ಗದರ್ಶನದಲ್ಲಿ ಸಾದರಪಡಿಸಿದ 'ಗಡಿನಾಡ ಕನ್ನಡ ಶಾಸನೋಕ್ತ ಸ್ಥಳನಾಮಗಳು' ಎಂಬ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿಯನ್ನು ಪ್ರಧಾನ ಮಾಡಲಾಗಿದೆ.

### ಕೌಶಲ್ಯಾಭಿವೃದ್ಧಿ ಅಧಿಕಾರಿ ಗೋಪಾಲ ರೆಡ್ಡಿ ನಿಧನ

» ಚಿತ್ರದುರ್ಗ



ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಜಿಲ್ಲಾ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಕೆ. ಗೋಪಾಲ ರೆಡ್ಡಿ (60) ಅವರು ಅನಾರೋಗ್ಯದಿಂದ ಇಂದು (ಶನಿವಾರ) ರಾತ್ರಿ 8:30 ರ ಸುಮಾರಿಗೆ ಬಸವೇಶ್ವರ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂದು ಬಳಗದವರನ್ನು ಅಗಲಿದ್ದಾರೆ.
ಮೃತರ ಅಂತ್ಯಕ್ರಿಯೆಯನ್ನು ನಾಳೆ (ಭಾನುವಾರ) ಮೆದೇಹಳ್ಳಿ ಬಳಿಯಿರುವ ಅವರ ಜಮೀನಿನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಹೆಚ್ಚಿನ ಮಾಹಿತಿಗಾಗಿ : ಪಾಲಯ್ಯ ಒಂಭುಟಜ: 9449374248 ಸಂಪರ್ಕಿಸಲು ಕೋರಿದೆ.

### ಓಬಳೇಶ್‌ಗೆ ಡಾಕ್ಟರೇಟ್

» ಪರಶುರಾಂಪುರ



ಸಮೀಪದ ಮೈಲನಹಳ್ಳಿ ಗ್ರಾಮದ ಓಬಳೇಶ್.ಆರ್ ಕನ್ನಡ ವಿಶ್ವವಿದ್ಯಾಲಯದ ಕನ್ನಡ ಸಾಹಿತ್ಯ ಅಧ್ಯಯನ ವಿಭಾಗಕ್ಕೆ ಮಂಡಿಸಿದ ಮಹಾಪ್ರಬಂಧಕ್ಕೆ ಕನ್ನಡ ವಿ.ವಿ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಓಬಳೇಶ್. ಆರ್ ಅವರು ಸಹ ಪ್ರಾಧ್ಯಾಪಕರಾದ ಡಾ. ದಾಕ್ಷಾಯಣಮ್ಮ. ಎಂ ಅವರ ಮಾರ್ಗದರ್ಶನದಲ್ಲಿ ಕನ್ನಡ ಕಾಲಜ್ಞಾನ ಸಾಹಿತ್ಯದ ಸ್ವರೂಪ ಮತ್ತು ತಾತ್ವಿಕತೆ ಎಂಬ ವಿಷಯ ಕುರಿತು ಮಹಾ ಪ್ರಬಂಧ ಮಂಡಿಸಿದ್ದಾರೆ. ಇವರಿಗೆ ಕನ್ನಡ ವಿಶ್ವವಿದ್ಯಾಲಯದ 32ನೇ ಘಟಿಕೋತ್ಸವದಲ್ಲಿ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಗಿದೆ.

### ಸಂಭ್ರಮದಿಂದ ಜರುಗಿದ ಆರತಿಬಾನೋತ್ಸವ

» ಮೊದಲ ಪುಟದಿಂದ

ಮುಂಜಾನೆ ಸುಮಾರು 4 ಗಂಟೆಯ ಸುಮಾರಿಗೆ ಪ್ರಾರಂಭಗೊಂಡ ವೈಭವಯುತವಾದ ಸೋಮನ ಕುಣಿತ ಸುಮಾರು 4 ರಿಂದ 5 ಗಂಟೆಗಳ ಕಾಲ ನಡೆಯಿತು.ಇದನ್ನು ನೋಡಲು ಸುತ್ತ ಮುತ್ತಲ ಗ್ರಾಮದ ಸಾವಿರಾರು ಭಕ್ತರು ಭಾಗವಹಿಸಿ ಸೋಮದೇವರಿಗೆ ಮಂಡಕ್ಕಿ ತೂರುವ ಮೂಲಕ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಉತ್ಸವದ ನಂತರ ಗ್ರಾಮದ ಊರ ಬಾಗಿಲಲ್ಲಿ ಬಲಿಯನ್ನು ನೀಡಲಾಯಿತು.ಈವರ್ಷದಆರತಿಬಾನೋತ್ಸವದಲ್ಲಿ ಪುರಸಭಾ ಸದಸ್ಯೆ ಶ್ರೀಮತಿ ಡಾ:ಸ್ವಾತಿ ಹಾಗೂ ಸದ್ಗುರು ಆಯುರ್ವೇದ ಮಾಲಿಕರು ಮತ್ತು ಉದ್ಯಮಿಗಳಾದ ಡಿ.ಎಸ್.ಪ್ರದೀಪ್ ಇವರ ಪ್ರಾಯೋಜಕತ್ವದಲ್ಲಿ ಶ್ರೀ ಆಂಜನೇಯಸ್ವಾಮಿ ಮತ್ತು ಶ್ರೀ ಕೆರೆಯಾಗಳಮ್ಮನವರ ತಿರುಪತಿ ತಿರುಮಲ ಭವ್ಯ ಹೂವಿನ ಮಂಟಪೋತ್ಸವದಲ್ಲಿ, ಗ್ರಾಮದ ಶ್ರೀ ಆಂಜನೇಯಸ್ವಾಮಿ ಹಾಗೂ ಶ್ರೀ ಕೆರೆಯಾಗಳಮ್ಮ ದೇವಿಯವರು ಮಂಟಪದಲ್ಲಿ ಪ್ರತಿಷ್ಠಾನಗೊಂಡು ಎರಡೂ ದೇವರುಗಳ ಸಮ್ಮುಖದಲ್ಲಿ ಬಾನೋತ್ಸವ ಜರುಗಿದ್ದು ವಿಶೇವಾಗಿತ್ತು.

---

ಸಿಆರ್‌ಪಿಸಿ ಹಾಗೂ ಎನ್‌ಡಿಪಿಎಸ್ ಕಾಯ್ದೆ ಕುರಿತು ಕಾರ್ಯಾಗಾರದಲ್ಲಿ ಹೈಕೋರ್ಟ್ ನ್ಯಾಯಮೂರ್ತಿ

# ಅಪರಾಧ ನಿರ್ಣಯದಲ್ಲಿ ಪರಿಣಾಮಕಾರಿ ತನಿಖೆಯ ಪಾತ್ರ ಮಹತ್ವದ್ದು: ನ್ಯಾ.ಪ್ರದೀಪ್ ಸಿಂಗ್ ಯೆರೂರ್

» ಚಿತ್ರದುರ್ಗ

ನ್ಯಾಯಾಲಯಗಳು ಅಪರಾಧ ನಿರ್ಣಯ ಕೈಗೊಳ್ಳುವಲ್ಲಿ ಪರಿಣಾಮಕಾರಿ ತನಿಖೆಯ ಪಾತ್ರ ಮಹತ್ವದ್ದಾಗಿದೆ ಎಂದು ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಹಾಗೂ ಚಿತ್ರದುರ್ಗ ಜಿಲ್ಲಾ ಆಡಳಿತಾತ್ಮಕ ನ್ಯಾಯಮೂರ್ತಿ ಪ್ರದೀಪ್ ಸಿಂಗ್ ಯೆರೂರ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ವತಿಯಿಂದ ನ್ಯಾಯಾಂಗ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಆಯೋಜಿಸಲಾಗಿದ್ದ ಅಪರಾಧ ಪ್ರಕ್ರಿಯೆ ಸಂಹಿತೆ (ಸಿಆರ್‌ಪಿಸಿ) ಹಾಗೂ ಎನ್‌ಡಿಪಿಎಸ್ ಕಾಯ್ದೆ ಕುರಿತು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಗುರುತರ ಅಪರಾಧ ಪ್ರಕರಣಗಳಲ್ಲಿ ಅಪರಾಧಿಗಳಿಗೆ ಶಿಕ್ಷೆ ವಿಧಿಸುವ ಪ್ರಮಾಣ ಅತ್ಯಂತ ಕಡಿಮೆಯಿದೆ. ಇದಕ್ಕೆ ಕಾರಣ ನ್ಯಾಯಾಧೀಶರ ಮುಂದೆ ಪ್ರಕರಣದ ತನಿಖೆ ಹಾಗೂ ಸಾಕ್ಷಿಗಳನ್ನು ಸರಿಯಾದ ರೀತಿಯಲ್ಲಿ ಪ್ರಸ್ತುತ ಪಡಿಸದಿರುವುದೇ ಆಗಿದೆ. ಇಂದಿಗೂ ಜನಸಾಮಾನ್ಯರು ಪೊಲೀಸ್ ಠಾಣೆ ಆಗಮಿಸಿ ತಮ್ಮ ದೂರುಗಳನ್ನು ದಾಖಲಿಸಲು ಹಿಂದೇಟು ಹಾಕುತ್ತಾರೆ. ಇದಕ್ಕೆ ಮುಖ್ಯ ಕಾರಣ ಪೊಲೀಸರು ಸಾರ್ವಜನಿಕರೊಂದಿಗೆ ವರ್ತಿಸುವ ರೀತಿ. ಬೇರೆ ಯಾವ ದಾರಿ ಕಾಣದವರು ಪೊಲೀಸ್ ಹಾಗೂ ನ್ಯಾಯಾಲಯಗಳಿಗೆ ನ್ಯಾಯ ಅರಸಿ ಬರುತ್ತಾರೆ. ಪೊಲೀಸರು ಅವರೊಂದಿಗೆ ಸಾವಧಾನದಿಂದ ವರ್ತಿಸಬೇಕು.




ಕಾನೂನಿನ ನಿಯಮಗಳನ್ನು ಅವರಿಗೆ ಮನವರಿಕೆ ಮಾಡಿಕೊಟ್ಟು ವಿಚಾರಣೆ ನಡೆಸಬೇಕು ಎಂದು ತಿಳಿಸಿದರು.

ಪೊಲೀಸರು ತಮಗೆ ಕೊಟ್ಟಿರುವ ಅಧಿಕಾರವನ್ನು ಸೂಕ್ತ ರೀತಿಯಲ್ಲಿ ಬಳಸಿ ವಿಚಾರಣೆ ನಡೆಸಬೇಕು. ಯಾವುದೇ ರೀತಿಯಪೂರ್ವಾಗ್ರಹಹಾಗೂಒತ್ತಡಗಳಿಗೆ ಒಳಗಾಗಬಾರದು. ನ್ಯಾಯದಾನ ವ್ಯವಸ್ಥೆಯಲ್ಲಿ ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸಲ್ಲಿ ಪೊಲೀಸರು ಪ್ರಮುಖ ಪಾತ್ರ ವಹಿಸುತ್ತಾರೆ. ಹಾಗೇ ಪ್ರತಿಯೊಬ್ಬರ ಹಕ್ಕುಗಳನ್ನು ರಕ್ಷಿಸುವ ಜವಾಬ್ದಾರಿಯೂ ಪೊಲೀಸರ ಮೇಲಿದೆ ಎಂದರು.

ದೇಶದ ನ್ಯಾಯಾಂಗ ವ್ಯವಸ್ಥೆ ಯಾವುದೇ ಒತ್ತಡಗಳಿಗೆ ಒಳಗಾಗದೆ ಕಾರ್ಯ ನಿರ್ವಹಿಸುವುದಕ್ಕೆ ಹೆಸರುವಾಸಿಯಾಗಿದೆ.ಈಪರಂಪರೆಯನ್ನು ಮುಂದುವರೆಸುವುದರ ಜೊತೆಗೆ ಇನ್ನಷ್ಟು ಬಲಪಡಿಸಬೇಕಿದೆ. ತಂತ್ರಜ್ಞಾನ ಅಭಿವೃದ್ಧಿ ಹಾಗೂ ಸಮಾಜದಲ್ಲಿ ಬದಲಾವಣೆಗಳಿಗೆ ಅನುಗುಣವಾಗಿ ನ್ಯಾಯಾಂಗ ವ್ಯವಸ್ಥೆ ವಿಕಾಸ ಹೊಂದಬೇಕಾಗಿದೆ. ಈವರೆಗಿನ ನ್ಯಾಯಂಗ ವ್ಯವಸ್ಥೆಯಲ್ಲಿ ಬದಲಾವಣೆ ಪ್ರಗತಿದಾಯಕವಾಗಿದೆ. ಆದಾಗ್ಯೂ ಇನ್ನೂ ತೀವ್ರವಾಗಿ ಪ್ರಗತಿ ಸಾಧಿಸಬೇಕಿದೆ ಎಂದು ಅಭಿಪ್ರಾಯ ಪಟ್ಟರು.

ನ್ಯಾಯಾಧೀಶರು ತಮ್ಮ ವೃತ್ತಿಯಲ್ಲಿ ನಾಲ್ಕು ವಿಷಯಗಳನ್ನು ಪಾಲಿಸಬೇಕು. ಪ್ರಕರಣಗಳನ್ನು ಸಹಾನುಭೂತಿಯಿಂದ ಆಲಿಸಿ, ಬುದ್ಧಿವಂತಿಕೆಯಿಂದ ಉತ್ತರಿಸಬೇಕು. ಪ್ರತಿಯೊಂದು ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಇದರ ಆಧಾರದಲ್ಲಿ ನಿಷ್ಪಕ್ಷಪಾತವಾಗಿತೀರ್ಮಾನಕೈಗೊಳ್ಳಬೇಕು. ಇವುಗಳ ಜೊತೆಗೆ ಐದನೆಯದಾಗಿ ಪ್ರತಿಯೊಬ್ಬ ನ್ಯಾಯಾಧೀಶರು ವಕೀಲರ ಹಾಗೂ ಅರ್ಜಿದಾರರ ಮನವಿಯನ್ನು ತಾಳ್ಮೆಯಿಂದ ಆಲಿಸಬೇಕು ಎಂದರು.

ಕೆಲವು ಬಾರಿ ವಕೀಲರ ವಾದ ಹಾಗೂ ಅರ್ಜಿದಾರರ ಮನವಿಯಲ್ಲಿ ಹುರುಳು ಇಲ್ಲದಿರಬಹುದು. ಪ್ರಕರಣದ ಹೊರತಾಗಿನ ವಿಷಯಗಳನ್ನು ಸಹ ಪ್ರಸ್ತಾಪಿಸಬಹುದು. ನೀವು ತಾಳ್ಮೆಯಿಂದ ಆಲಿಸದೇ ಹೋದರೆ ಅವರಲ್ಲಿ ನ್ಯಾಯಾಂಗ ವ್ಯವಸ್ಥೆ ಮೇಲಿನ ಭರವಸೆ ಕಡಿಮೆಯಾಗುತ್ತದೆ. ಆದ್ದರಿಂದ ತಾಳ್ಮೆಯಿಂದ ಆಲಿಸಬೇಕು ಎಂದು ಸಲಹೆ ನೀಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಹೇಳಿದಂತೆ ಎಷ್ಟೇ ಉತ್ತಮ ಸಂವಿಧಾನ ಅಥವಾ ಕಾನೂನು ಇದ್ದರೂ, ಅದನ್ನು ಜಾರಿ ಮಾಡುವವರು ಸರಿಯಿಲ್ಲದಿದ್ದರೆ ಅದು ವ್ಯರ್ಥವಾಗುತ್ತದೆ. ಈ ಮಾತು ಪ್ರಾಯೋಗಿಕವಾಗಿ ಇದು ಹೇಗೆ ಹೆಚ್ಚು ಅನ್ವಯಿಕವಾಗುತ್ತವೆ ಎಂಬುದು ಎಲ್ಲಾ ನ್ಯಾಯಧೀಶರು ಹಾಗೂ ಪ್ರಕರಣಗಳ ತನಿಖೆ ನಡೆಸುವ ಪೊಲೀಸ್ ಅಧಿಕಾರಿಗಳಿಗೆ ಹೆಚ್ಚು ಅನುಭವಕ್ಕೆ ಬಂದಿರುತ್ತದೆ ಎಂದರು.

ನ್ಯಾಯಾಂಗ ವ್ಯವಸ್ಥೆ ಇತರೆ ಪಾಲುದಾರ ಸಂಸ್ಥೆಗಳ ಸಹಾಯ ಇಲ್ಲದೆ ಏಕಾಂಗಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ. ಪ್ರಜಾಪ್ರಭುತ್ವ ನಾಲ್ಕು ಆಧಾರ ಸ್ಥಂಭಗಳಾದ ಶಾಸಕಾಂಗ, ಕಾಯಾರ್ಂಗ, ನ್ಯಾಯಾಂಗ ಹಾಗೂ ಮಾಧ್ಯಮಗಳು ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಸಮಾನ ಪಾತ್ರ ಹೊಂದಿವೆ. ಈ ಎಲ್ಲಾ ಅಂಗಗಳು ಸೇರಿ ನ್ಯಾಯದಾನ ಪ್ರಕ್ರಿಯೆ ಸರಿಯಾಗಿ ಜಾರಿಯಾಗಲು ಅತಿಮುಖ್ಯ ಪಾತ್ರವಹಿಸುತ್ತವೆ ಎಂದು ತಿಳಿಸಿದರು.

ನ್ಯಾಯ ಅರಸಿ ನ್ಯಾಯಾಲಯಗಳಿಗೆ ಬರುವ ಅರ್ಜಿದಾರರಿಗೆ ನ್ಯಾಯದಾನ ಒದಗಿಸುವಲ್ಲಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ನ್ಯಾಯಾಲಯಗಳು ಪ್ರಮುಖ ಪಾತ್ರವಹಿಸುತ್ತವೆ. ಉನ್ನತ ನ್ಯಾಯಾಲಯಗಳ ಹಾಗೇ ಎಲ್ಲಾ ಹಂತದ ನ್ಯಾಯಾಲಯದ ನ್ಯಾಯಾಧೀಶರಿಗೂ ನ್ಯಾಯದಾನ ಮಾಡುವ ಹಕ್ಕನ್ನು ಸಂವಿಧಾನ ನೀಡಿದೆ. ಉತ್ತಮ ನ್ಯಾಯದಾನ ವ್ಯವಸ್ಥೆ ಉತ್ತಮ ಸಮಾಜದ ಗುಣಮಟ್ಟದ ಚಿಹ್ನೆಯಾಗಿದೆ ಎಂದರು.

ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ಸಂಪನ್ಮೂಲ ವ್ಯಕ್ತಿ ಎಸ್. ಆರ್.ಸೋಮಶೇಖರ್ ಅವರು ಅಪರಾಧ ಪ್ರಕ್ರಿಯೆ ಸಂಹಿತೆ ಹಾಗೂ ಎನ್.ಡಿ.ಪಿ.ಎಸ್ ಕಾಯ್ದೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶೆ ಕೆ.ಬಿ.ಗೀತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ತಿಮ್ಮಪ್ಪ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಸೇರಿದಂತೆ ನ್ಯಾಯಾಂಗ ಹಾಗೂ ಪೊಲೀಸ್ ಅಧಿಕಾರಿಗಳು ಇದ್ದರು.

## ಮಹಿಳೆಯರಿಗೆ ಗೌರವ ತಂದ ಶರಣೆ ಅಕ್ಕಮಹಾದೇವಿ

» ಚಿತ್ರದುಗ

ಸ್ತ್ರೀವಾದ ಎನ್ನುವುದು ಗೊತ್ತಿಲ್ಲದ ಕಾಲದಲ್ಲಿಯೇ ಮಹಿಳೆಯರಿಗೆ ಗೌರವ ತಂದುಕೊಟ್ಟಂತ ಶರಣೆ ಅಕ್ಕಮಹಾದೇವಿ ಕನ್ನಡ ನಾಡಿನಲ್ಲಿದ್ದರು ಎನ್ನವುದೇ ಒಂದು ವಿಸ್ಮಯ ಎಂದು ಡಾ.ಪಿ.ಯಶೋಧ ರಾಜಶೇಖರಪ್ಪ ಹೇಳಿದರು.ಜಾಗತಿಕ ಲಿಂಗಾಯಿತ ಮಹಾಸಭಾ ಜಿಲ್ಲಾ ಮಹಿಳಾ ಘಟಕದಿಂದ ನೀಲಕಂಠೇಶ್ವರಸ್ವಾಮಿ ದೇವಸ್ಥಾನದ ಸಭಾಂಗಣದಲ್ಲಿ ನಡೆದ ತಿಂಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪರಂಪರೆಯಿಂದ ಬಂದಂತ ಸ್ತ್ರೀಯರಿಗೆ ಸಂಬಂಧಿಸಿದ ಅನೇಕ ಸಂಗತಿ, ಸಂಸಾರದ ಪರಿಕಲ್ಪನೆಯನ್ನು ಬುಡ ಮೇಲು ಮಾಡಿದ ಅಕ್ಕಮಹಾದೇವಿ ಮಹಿಳೆ ತನ್ನ ಸಾಧನೆಗಾಗಿ ಸಮಾಜವನ್ನು ಎದುರುಹಾಕಿಕೊಂಡುಒಂಟಿಯಾಗಿ ಹೋಗುವುದು ಸಾಧ್ಯವಿಲ್ಲ ಎನ್ನುವ ನಿಲುವನ್ನು ತೊಡೆದು ಹಾಕಿದ ಶ್ರೇಷ್ಟ ವಚನಗಾರ್ತಿ, ಕವಿಯತ್ರಿ ಎಂದು ಬಣ್ಣಿಸಿದರು.ಪುರಾಣ, ಪುಣ್ಯಕಥೆ, ವೇದಶಾಸ್ತ್ರಗಳಿಂದ ಏನು ಪ್ರಯೋಜನವಿಲ್ಲ. ನುಚ್ಚು, ತೌಡು ಕುಟ್ಟಿದಂತೆ ಸಮಾಜ ನಾನಾ ರೀತಿಯಲ್ಲಿನಿಂದಿಸಿದಾಗತನಗೆತಾನೆ ಸಮಾಧಾನಪಡಿಸಿಕೊಳ್ಳುತ್ತಿದ್ದ ದಿಟ್ಟ ಮಹಿಳೆ. ಹೊಸ ಪರಂಪರೆಯನ್ನು



ಕಟ್ಟಿಕೊಟ್ಟ ಅಕ್ಕಮಹಾದೇವಿ ತನಗೆ ಅನಿಸಿದ್ದನ್ನು ನಿರ್ಭಿತಿ ಆತ್ಮವಿಶ್ವಾಸದಿಂದ ಹೇಳುತ್ತಿದ್ದಳು.

ಸ್ತ್ರಿವಾದ ಎನ್ನುವುದು ಗೊತ್ತಿಲ್ಲದ ಕಾಲದಲ್ಲಿಯೇ ಸ್ತ್ರೀವಾದಿಯಾಗಿ ಮಹಿಳೆಯರಿಗೆ ಪರವಾಗಿದ್ದ ಕನ್ನಡ ನಾಡಿನ ವಿಸ್ಮಯಗಾರ್ತಿ. ಹಾಗಾಗಿ ಅಲ್ಲಮಪ್ರಭು, ಬಸವಣ್ಣನವರಿಂದ ಶರಣ ಕುಲದ ಶ್ರೇಷ್ಠ ಮಹಾಪ್ರಭೆ ಎಂದು ಶ್ಲಾಘನೆಗೊಳಗಾಗಿದ್ದು, ಇಡಿ ಮಹಿಳಾ ಕುಲಕ್ಕೆ ಸಂದ ಗೌರವ ಎಂದು ಹೇಳಿದರು.ಜಾಗತಿಕ ಲಿಂಗಾಯಿತ ಮಹಾಸಭಾದ ಸಹ ಸಂಚಾಲಕ ಜಿ.ಟಿ.ನಂದೀಶ ಮಾತನಾಡಿ ಭಾರತೀಯ ಪರಂಪರೆಯಲ್ಲಿ ಸಂಕ್ರಾಂತಿ ಹಬ್ಬದ ಸಾಂಸ್ಕೃತಿಕ ವಿಶೇಷತೆಯನ್ನು ವಿವರಿಸಿದರು.

ಶ್ರೀಮತಿ ಶೈಲಜಾ ಬಾಬು ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಮಹಿಳೆಯರಲ್ಲಿ ಜಾಗೃತಿ ಮೂಡಿಸುವಂತ ಇಂತಹ ಕಾರ್ಯಕ್ರಮಗಳಲ್ಲಿ ಲಿಂಗಾಯಿತ ಧರ್ಮದ ಮಹಿಳೆಯರು ಹೆಚ್ಚು ಭಾಗವಹಿಸುವಂತೆ ಮನವಿ ಮಾಡಿದರು.

ಉಪನ್ಯಾಸಕಿ ರಶ್ಮಿ ಮಾತನಾಡಿ ಪರಸ್ಪರರು ಎಳ್ಳು ಬೆಲ್ಲವನ್ನು ಸವಿಯುವ ಮಕರ ಸಂಕ್ರಾಂತಿ ಹಬ್ಬವನ್ನು ಬೇರೆ ಬೇರೆ ರಾಜ್ಯಗಳಲ್ಲಿ ಒಂದೊಂದು ಹೆಸರಿನಿಂದ ಕರೆಯಲಾಗುವುದು ಎಂದು ಹಬ್ಬದ ವಿಶೇಷತೆ ಕುರಿತು ವಿವರಿಸಿದರು.

ಲಿಂಗಾಯಿತ ಮಹಾಸಭಾ ಮಹಿಳಾ ಘಟಕದ ಕಾರ್ಯದರ್ಶಿ ಶ್ರೀಮತಿ ಜಯಶೀಲ ವೀರಣ್ಣ, ಶ್ರೀಮತಿ ಶೋಭ ಮಲ್ಲಿಕಾರ್ಜುನ್ ವೇದಿಕೆಯಲ್ಲಿದ್ದರು.

ಬಸವರಾಜ ಕಟ್ಟಿ, ಡಿ.ಎಂ. ಧನಂಜಯ, ಶಿವಾನಂದ ವರ್ಷ ಹಾಗೂ ಸದಸ್ಯರುಗಳು ಹಾಜರಿದ್ದರು.ಶ್ರೀಮತಿ ಮೀನಾಕ್ಷಿ ಸ್ವಾಗತಿಸಿದರು. ಶ್ರೀಮತಿ ವೀಣ ವಂದಿಸಿದರು. ಶ್ರೀಮತಿ ಗೀತ ನಿರೂಪಿಸಿದರು.

## ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘದ ನೂತನ ಕ್ಯಾಲೆಂಡರನ್ನು ಶಾಸಕ ಡಾ.ಎಂ.ಚಂದ್ರಪ್ಪ ಬಿಡುಗಡೆ




» ಹೊಳಲ್ಕೆರೆ

ಸರ್ಕಾರಿ ನೌಕರಿಯಲ್ಲಿದ್ದಾಗ ಉತ್ತಮ ಕೆಲಸ ಮಾಡಿ ಸಮಾಜದ ಋಣ ತೀರಿಸಿದ್ದೇನೆಂಬ ಆತ್ಮತೃಪ್ತಿ ನಿಮ್ಮಲ್ಲಿರಬೇಕೆಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು. ಪಟ್ಟಣದಲ್ಲಿರುವ ಸ್ನೇಹ ಕಂಫರ್ಟ್‌ನಲ್ಲಿ ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘ ಹೊಳಲ್ಕೆರೆ ಶಾಖೆ ವತಿಯಿಂದ ಶನಿವಾರ ನಡೆದ ನಿವೃತ್ತ ನೌಕರರ ದಿನಾಚರಣೆ ಹಾಗೂ ನೂತನ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದರು.ಸಾರ್ವಜನಿಕರ ಬದುಕಿನಲ್ಲಿ ನಿಮ್ಮದು ಅತ್ಯುತ್ತಮವಾದ ಪಾತ್ರವಿದೆ. ಭರಮಸಾಗರದಲ್ಲಿ ಮೊದಲ ಬಾರಿಗೆ ಚುನಾವಣೆಗೆ ನಿಂತಾಗ ನಾನು ಗೆದ್ದು ಶಾಸಕನಾಗಲು ನಿವೃತ್ತ ನೌಕರರು ಸಾಕಷ್ಟು ಸಹಕರಿಸಿದ್ದಾರೆ. 1994 ರಲ್ಲಿ ಮೊದಲ ಬಾರಿಗೆ ಶಾಸಕನಾಗಿದ್ದೆ. ಅಲ್ಲಿಂದ ಇಲ್ಲಿಯತನಕ ಅನೇಕ ಐ.ಎ.ಎಸ್. ಅಧಿಕಾರಿಗಳ ಒಡನಾಟದಲ್ಲಿದ್ದೇನೆ. ಈಗ ನಾನು ವಿರೋಧ ಪಕ್ಷದ ಶಾಸಕನಾಗಿದ್ದರೂ ಏನೆ ಕೆಲಸ ಹೇಳಿದರು ಚಾಚು ತಪ್ಪದೆ ಮಾಡುತ್ತಾರೆ. ನನ್ನ ಕ್ಷೇತ್ರದಲ್ಲಿ ಯಾವ ನೌಕರ, ಅಧಿಕಾರಿಯ ಮೇಲೆ ಒತ್ತಡ ಹೇರಿಲ್ಲ. ಸಲೀಸಾಗಿ ಕೆಲಸ ಮಾಡಿಕೊಂಡು ಹೋಗುತ್ತಿದ್ದಾರೆ. ಎಷ್ಟು ದಿನ ಬದುಕುತ್ತೇವೆನ್ನುವುದು ಮುಖ್ಯವಲ್ಲ. ಇರುವಷ್ಟು ಸಮಯದಲ್ಲಿ ನಾಳೆ ಮಾಡೋಣ ಎನ್ನುವ ಕೆಲಸವನ್ನು ಇಂದು ಈಗಲೇ ಏಕೆ ಮಾಡಬಾರದು ಎನ್ನುವ ಮನಸ್ಸು ನೌಕರರಲ್ಲಿರಬೇಕು. ಭರಮಸಾಗರ ಕ್ಷೇತ್ರದಲ್ಲಿ ನಾನು ಕೈಗೊಂಡ ಅಭಿವೃದ್ಧಿ ಕೆಲಸಗಳೇ ಐದನೇ ಬಾರಿಗೆ ಶಾಸಕನಾಗಲು ಕಾರಣ ಎಂದು ಸ್ಮರಿಸಿಕೊಂಡರು.

**ಪ್ರಮುಖ ಸುದ್ದಿ**

# ಫೆ.9ರಂದು ವಚನಕಾರರ ಆರಾಧನಾಮಹೋತ್ಸವ

» ಹೊಸದುರ್ಗ

ಕರ್ನಾಟಕ ಸಂಗೀತ ಸಾಮ್ರಾಟ ತ್ಯಾಗರಾಜರು, ಪುರಂದರದಾಸರು, ಕನಕದಾಸರು, ಬಸವಾದಿ ವಚನಕಾರರ ಆರಾಧನಾ ಮಹೋತ್ಸವ ಸಮಿತಿ, ಗವಿರಂಗಾಪುರದ ಗವಿರಂಗನಾಥ ಸ್ವಾಮಿ ಪುಣ್ಯಕ್ಷೇತ್ರ, ಕಸಪಾ ತಾಲ್ಲೂಕು ಹಾಗೂ ಶ್ರೀರಾಂಪುರ ಹೋಬಳಿ ಘಟಕದ ವತಿಯಿಂದ ಫೆ. 9 ರಂದು ತಾಲ್ಲೂಕಿನ ಗವಿರಂಗಾಪುರದಲ್ಲಿ ಬೆ.9 ರಿಂದ ರಾತ್ರಿ 10 ಗಂಟೆಯವರೆಗೆ ಆರಾಧನಾ ಮಹೋತ್ಸವ ನಡೆಯಲಿದೆ ಎಂದು ಸಮಿತಿ ಅಧ್ಯಕ್ಷ ಹೆಗ್ಗೆರೆ ರಂಗಪ್ಪ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಭಾನುವಾರ ಆಯೋಜಿಸಿದ್ದ 'ಪೂರ್ವ ಸಿದ್ಧತಾ ಸಭೆಯಲ್ಲಿ' ಭಾಗವಹಿಸಿ, ಮಾಹಿತಿ ನೀಡಿದರು.

ಫೆ. 9 ರಂದು ಬೆಳಿಗ್ಗೆ 9 ಕ್ಕೆ ಗಂಗಾಪೂಜೆ ನಂತರ ತ್ಯಾಗರಾಜರು, ಪುರಂದರದಾಸರು, ಕನಕದಾಸರು ಹಾಗೂ ಬಸವೇಶ್ವರರ ಭಾವಚಿತ್ರದ ಮೆರವಣಿಗೆ, ನಂತರ ಹರ್ಷಿತಾ ಕಾವಾಡಿ ಅವರ ಸ್ಯಾಕ್ಸೊಫೋನ್ ವಾದನದೊಂದಿಗೆ ವೇದಿಕೆ ಕಾರ್ಯಕ್ರಮ ಆರಂಭವಾಗಿರುವುದು.



ಸಾಹಿತಿ ಶ್ರೀಶೈಲ ಆರಾಧನಾ ಅವರ ಹೆಸರಿನಲ್ಲಿ ವೇದಿಕೆ ಸಿದ್ಧಗೊಳಲಿದೆ. ವಿವಿಧ ಕಲಾವಿದರು, ರಾಜಕೀಯ ಮುಖಂಡರ ಸಮ್ಮುಖದಲ್ಲಿ ಶಾಸಕ ಬಿ ಜಿ ಗೋವಿಂದಪ್ಪ ಉದ್ಘಾಟಿಸುವರು. ಕರ್ನಾಟಕ ಶಾಸ್ತ್ರೀಯ ಸಂಗೀತ ವಿದ್ವಾಂಸರಿಂದ ಕರ್ನಾಟಕ ಸಂಗೀತದ ಪಂಚರತ್ನ ಕೃತಿಗಳ ಗಾಯನ ನಡೆಸಲಾಗುವುದು. ಮಧ್ಯಾಹ್ನ 2 ಗಂಟೆಯಿಂದ ಭಜನೆ ಕಾರ್ಯಕ್ರಮ, ಸಂಜೆ 5 ಗಂಟೆಯಿಂದ ಭರತನಾಟ್ಯ ಕಾರ್ಯಕ್ರಮ ನಡೆಯಲಿದೆ ಎಂದು ಮಾಹಿತಿ ನೀಡಿದರು.

'ಚಿತ್ರದುರ್ಗ, ದಾವಣಗೆರೆ, ಚಿಕ್ಕಮಗಳೂರು, ಹಿರಿಯೂರು, ಹಾಸನ ಸೇರಿದಂತೆ ವಿವಿಧೆಡೆಯಿಂದ ಸಾವಿರಾರು ಕಲಾವಿದರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಈ ಕಾರ್ಯಕ್ರಮವನ್ನು 'ಅಂತರ್ ಜಿಲ್ಲಾ ಸಾಂಸ್ಕೃತಿಕ ಸಮ್ಮೇಳನ' ಎಂದೂ ಸಹ ಕರೆಯಬಹುದು. ಸ್ಥಳೀಯ ಕಲಾವಿದರಿಗೂ ಇದೊಂದು ಸುವರ್ಣಾವಕಾಶ. ವಚನ, ಕೀರ್ತನೆಯಂತಹ ಸಂಸ್ಕೃತಿ ಬಿಂಬಿಸುವ ಕಾರ್ಯ ಚಟುವಟಿಕೆಗಳು ಸದಾ ನಡೆಯುತ್ತಿರಬೇಕು. ಸಂಗೀತ ಸಾಹಿತ್ಯ ಒಂದಕ್ಕೊಂದು ಪೂರಕವಾಗಿದ್ದು, ಜನರ ಬೆಂಬಲವೂ ಸಹ ಅಭೂತಪೂರ್ವವಾಗಿದೆ. ಸ್ಥಳೀಯ ಕಲಾವಿದರಿಗೆ ಅವಕಾಶ ಕೊಡುವುದರ ಜೊತೆಗೆ ಸಮಾಜಕ್ಕೆ ಅವರ ಪರಿಚಯವಾದಂತಾಗುತ್ತದೆ ಮತ್ತು ಪ್ರೋತ್ಸಾಹ ದೊರಕಿಸಿಕೊಟ್ಟಂತಾಗುತ್ತದೆ.

> ಇತ್ತೀಚಿನ ದಿನಗಳಲ್ಲಿ ಬರುತ್ತಿರುವ ಚಿತ್ರಗಳಲ್ಲಿ ಬಳಸಿರುವ ಸಾಹಿತ್ಯ ಕೇಳಿದರೆ, ಬಹಳ ಬೇಸರವಾಗುತ್ತದೆ. ಕೆಲವೊಂದು ಹಾಡುಗಳು ಕೇಳುವುದಕ್ಕೆ ಅಸಹ್ಯವಾಗಿರುತ್ತವೆ. ಇಂತಹ ದಿನಗಳಲ್ಲಿ ದಾಸರ ಕೀರ್ತನೆ, ವಚನಕಾರರ ವಚನ ಗೀತೆ, ತತ್ವಪದಕಾರರ ತತ್ವಗಳನ್ನು ಹಾಡುವಂತಹ ಕಾರ್ಯಕ್ರಮವನ್ನು ಏರ್ಪಡಿಸಿರುವುದು ಬಹಳ ಸಂತೋಷ. ಕಲಾವಿದರಿಗೆ ಇಂತಹ ಕಾರ್ಯಕ್ರಮ ಒಳ್ಳೆಯ ವೇದಿಕೆಯಾಗಬೇಕು. ಇಂತಹ ಕಾರ್ಯಕ್ರಮಗಳು ಜನರಲ್ಲಿ ಸಾಹಿತ್ಯ ಮತ್ತು ಸಂಗೀತದ ಜೊತೆಗೆ ಆಧ್ಯಾತ್ಮಿಕತೆಯ ಅಭಿರುಚಿ ಬೆಳೆಸಬೇಕು.
>
> **» ಬಿ.ಎಲ್. ಲೋಕೇಶ್ವರಪ್ಪ ನಿಕಟಪೂರ್ವ ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್, ಹೊಸದುರ್ಗ ತಾಲೂಕು ಘಟಕ**

ಈ ಮಹೋತ್ಸವದಲ್ಲಿ ಭಾಗವಹಿಸುವ ಕಲಾವಿದರು ಜ. 21 ರೊಳಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹೆಗ್ಗೆರೆ ರಂಗಪ್ಪ 9686570571, ಜಿ.ಪಿ. ಜಯಪ್ರಕಾಶ್ 9886079854, ಹೆಗ್ಗೆರೆ ಶಂಕರಪ್ಪ 9845647391, ಕಾಚಾಪುರ ರಂಗಪ್ಪ 9880987237 ಗೆ ಸಂಪರ್ಕಿಸಬಹುದು, ಹೆಸರು ನೋಂದಾಯಿಸಿಕೊಳ್ಳಿ ಎಂದು ಸಮಿತಿ ಸದಸ್ಯರು ತಿಳಿಸಿದರು.

ಈ ವೇಳೆ ಸಭೆಯಲ್ಲಿ ಆರಾಧನಾ ಮಹೋತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಜಿ.ಪಿ. ಜಯಪ್ರಕಾಶ್, ಕಾರ್ಯದರ್ಶಿ ಪಾಂಡುರಂಗಪ್ಪ, ಖಜಾಂಚಿ ಹೆಗ್ಗೆರೆ ಶಂಕರಪ್ಪ, ಕಸಾಪ ಶ್ರೀರಾಂಪುರ ಹೋ. ಘಟಕದ ಅಧ್ಯಕ್ಷ ಕಾಚಾಪುರ ರಂಗಪ್ಪ, ಸಾಹಿತ್ಯಾಸಕ್ತರುಗಳಾದ ಬ. ಮೈಲಾರಪ್ಪ, ಧನಂಜಯ್ ಮೆಂಗಸಂದ್ರ, ಹೆಗ್ಗೆರೆ ಕುಮಾರ್, ಮುರುಳಿ, ಕಂಠೇಶ್ ಸೇರಿದಂತೆ ಹಲವರಿದ್ದರು.

## ಫಾಸ್ಟ್ ನ್ಯೂಸ್

### ಆಶಾಜಿ.ಬಿ.ಗೆ ಪಿಎಚ್‌ಡಿ ಪದವಿ

» ಚಿತ್ರದುರ್ಗ



ತಾಲ್ಲೂಕಿನ ಹೊಸದ್ಯಾಮವ್ವನಹಳ್ಳಿ ಗ್ರಾಮದ ಆಶಾ ಜಿ.ಬಿ. ಇವರಿಗೆ ಹಂಪಿ ಕನ್ನಡ ವಿಶ್ವವಿದ್ಯಾನಿಲಯ ಪಿ.ಎಚ್.ಡಿ. ಪದವಿ ನೀಡಿದೆ. ಸಮಾಜ ವಿಜ್ಞಾನಗಳ ನಿಕಾಯದ ಅಭಿವೃದ್ಧಿ ಅಧ್ಯಯನ ವಿಭಾಗದ ಡಾ.ಪ್ರಜ್ಞಾ ಕೆ.ವಿ.ರವರ ಮಾರ್ಗದರ್ಶನದಲ್ಲಿ ತಳ ಮಟ್ಟದ ಮಹಿಳಾ ಅಭಿವೃದ್ಧಿ ಕಾರ್ಯಕರ್ತೆಯರ ಕಾರ್ಯಕ್ಷಮತೆ ಎಂಬ ವಿಷಯದಲ್ಲಿ ಮಹಾ ಪ್ರಬಂಧ ಮಂಡಿಸಿದ ಆಶಾ ಜಿ.ಬಿ.ರವರಿಗೆ ಹಂಪಿ ಕನ್ನಡ ವಿಶ್ವವಿದ್ಯಾನಿಲಯದ 32 ನೇ ಘಟಿಕೋತ್ಸವದಲ್ಲಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಪಿ.ಎಚ್.ಡಿ. ಪದವಿ ಪ್ರಮಾಣ ಪತ್ರ ನೀಡಿ ಗೌರವಿಸಿದರು.

### ಕೊಳಗೇರಿ ನಿವಾಸಿಗಳ ಮನೆ ಎದುರು ನಿಂತ ನೀರು



» ಚಿತ್ರದುರ್ಗ

ನಗರದ ಹೊಳಲ್ಕೆರೆ ಟೋಲ್‌ಗೇಟ್ ಸಮೀಪವಿರುವ 150 ವರ್ಷ ಹಳೆಯದಾದ ರಾಜಕಾಲುವೆಯನ್ನು ಅರಣ್ಯ ಇಲಾಖೆಯ ನಿವೃತ್ತ ನೌಕರನೋರ್ವ ಅಕ್ರಮವಾಗಿ ಮುಚ್ಚಿರುವುದರಿಂದ ನೀರು ಹರಿಯದೆ ನಿಂತಿದ್ದು, ನಲವತ್ತು ವರ್ಷಗಳಿಂದಲೂ ಇಲ್ಲಿ ವಾಸಿಸುತ್ತಿರುವ 140 ಬಡ ಕುಟುಂಬಗಳು ದುರ್ವಾಸನೆಯಿಂದ ಸಹಿಸಿಕೊಂಡು ಕಾಲ ಕಳೆಯುವಂತಾಗಿದೆ. ಅರಣ್ಯ ಇಲಾಖೆಯ ನಿವೃತ್ತ ನೌಕರ ತನ್ನ ಹೆಂಡತಿ ಹೆಸರಿನಲ್ಲಿ ಜಮೀನಿದೆ ಎಂದು ದೌರ್ಜನ್ಯವೆಸಗಿ ರಾಜಕಾಲುವೆಯ ಒಂದು ಭಾಗವನ್ನು ಮಣ್ಣಿನಿಂದ ಮುಚ್ಚಿ ಚರಂಡಿ ಹೊಡೆದು ರಾಜಕಾಲುವೆಯ ಹಳ್ಳದ ದಿಕ್ಕನ್ನೆ ಬದಲಾಯಿಸಿದ್ದಾನೆ. ಅಕ್ರಮವಾಗಿ ಇಲ್ಲಿ ಪ್ರವೇಶಿಸಲು ಯಾರಿಗೂ ಅಧಿಕಾರವಿಲ್ಲದಿದ್ದರೂ ಗೂಂಡಾಗಿರಿ ತೋರಿ ರಾಜಕಾಲುವೆಯನ್ನು ಬಂದ್ ಮಾಡಿರುವುದರಿಂದ ಕೊಳಚೆ ನೀರು ಹರಿಯಲು ಜಾಗವಿಲ್ಲದಂತಾಗಿ ಬಡಪಾಯಿಗಳ ಮನೆ ಎದುರು ನಿಂತಿದೆ. ಇದರಿಂದ ಸೊಳ್ಳೆಗಳ ತಾಣವಾಗಿ ವಾಸಿಸಲು ಆಗದೆ ಬೇರೆ ಕಡೆ ಹೋಗಲು ಆಗದಂತ ಅತಂತ್ರ ಸ್ಥಿತಿಯಲ್ಲಿ ಹಳ್ಳದ ಏರಿಯಾ ಕೊಳಚೆ ಪ್ರದೇಶದ ನಿವಾಸಿಗಳು ಮಮ್ಮಲ ಮರುಗುತ್ತಿದ್ದಾರೆ. ಹೊಳಲ್ಕೆರೆ ರಸ್ತೆ, ಬಸವೇಶ್ವರ ಬಾಡಿ ಬಿಲ್ಡಿಂಗ್ ಹಿಂಭಾಗದ ನಿವಾಸಿಗಳಾದ ಅನ್ವರ್‌ಭಾಷ ಮತ್ತಿತರರು ರಾಜಕಾಲುವೆಯನ್ನು ಬಂದ್ ಮಾಡಿರುವ ವ್ಯಕ್ತಿ ವಿರುದ್ದ ಕಾನೂನು ರೀತಿಯ ಕ್ರಮ ಕೈಗೊಂಡು ಸರಾಗವಾಗಿ ನೀರು ಹರಿದು ಹೋಗುವಂತೆ ಮಾಡಬೇಕೆಂದು ಕಳೆದ ಕೆಲವು ದಿನಗಳ ಹಿಂದೆ ಜಿಲ್ಲಾಧಿಕಾರಿಗೆ ಮನವಿ ಮಾಡಿಕೊಂಡಿದ್ದಾರೆ.

### ಪಿ ಡಬ್ಲ್ಯು ಕಚೇರಿಗೆ ಹೊಂದಿಕೊಂಡಿರುವಂತಹ ಬಸ್ ಸ್ಟ್ಯಾಂಡ್ ಸರಿಪಡಿಸಿ



» ಹಿರಿಯೂರು

ನಗರದ ಪಿ ಡಬ್ಲ್ಯು ಕಚೇರಿಗೆ ಹೊಂದಿಕೊಂಡಿರುವ ಬಸ್ ಸ್ಟ್ಯಾಂಡ್ ಯಾವುದೇ ಸ್ವಚ್ಛತೆ ಹಾಗೂ ಶುಚಿತ್ವವಿಲ್ಲದೆ ಹಾಳಾಗಿದ್ದು, ಇಲ್ಲ ಬಸ್ಸಿಗಾಗಿ ಜನರು ಕಾದು ಕುಳಿತುಕೊಳ್ಳಲು ಸಾಧ್ಯವಾಗದ ರೀತಿಯಲ್ಲಿ ಕೊಳಚೆಯಿಂದ ತುಂಬಿದ್ದು, ಇದು ನಗರಸಭೆಯವರ ಕಣ್ಣಿಗೆ ಬೀಳದೇ ಇರುವುದು ಅತ್ಯಂತ ಶೋಚನೀಯ ಸಂಗತಿಯಾಗಿದೆ ಎಂಬುದಾಗಿ ಸಾರ್ವಜನಿಕರು ಈ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ.ಈ ಬಸ್ ನಿಲ್ದಾಣ ಒಂದು ಕಾಲದಲ್ಲಿ ಸುಂದರವಾದ ಬಸ್ ನಿಲ್ದಾಣವಾಗಿದ್ದು, ಈಗ ಇದಕ್ಕೆ ಹೊದಿಸಿರುವ ಶೀಟ್ ಗಳಿಗೆ ಗಾಳಿ-ಮಳೆಯಿಂದ ತುಂಬಾ ಹಾನಿಯಾಗಿದ್ದು, ಈ ಬಸ್ ನಿಲ್ದಾಣ ಉಪಯೋಗಕ್ಕೆ ಬರದಂತಾಗಿದೆ, ಇದರಿಂದ ನಗರಕ್ಕೆ ಬೇರೆಬೇರೆ ಊರುಗಳಿಂದ ಬಂದು ಈ ಬಸ್ ನಿಲ್ದಾಣದಲ್ಲಿ ಬಸ್ಸು ಇಳಿಯುವ ಜನರಿಗೆ ಮಳೆ-ಗಾಳಿಗೆ ಯಾವುದೇ ರಕ್ಷಣೆ ಇಲ್ಲದೆ ತೀವ್ರ ತೊಂದರೆಯಾಗಿದೆ. ನಗರಸಭೆಯಲ್ಲಿ ಅತ್ಯಂತ ದಕ್ಷರು, ಹಾಗೂ ಕ್ರಿಯಾಶೀಲ ಅಧಿಕಾರಿಗಳು ಆಗಿರುವ ಮಹಂತೇಶ್ ರಂತಹ ಆಯುಕ್ತರಿದ್ದು, ನಗರದ ಪಿ ಡಬ್ಲ್ಯು ಕಚೇರಿಗೆ ಹೊಂದಿಕೊಂಡಿರುವ ಬಸ್ ಸ್ಟ್ಯಾಂಟ್ ಜಾಗವನ್ನು ಶುಚಿತ್ವ ಹಾಗೂ ಸೌಂದರ್ಯವನ್ನು ಹೆಚ್ಚಿಸುವ ಮೂಲಕ ನಿಲ್ದಾಣದ ಅಭಿವೃದ್ಧಿಯನ್ನು ಮಾಡಿ, ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸುವ ಮೂಲಕ ನಗರದ ನಾಗರೀಕರ ಮೆಚ್ಚುಗೆಗೆ ಪಾತ್ರರಾಗಬೇಕು

# ಕನ್ನಡ ನಾಡು-ನುಡಿ ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯ: ಎಚ್.ಆಂಜನೇಯ

» ಹಿರಿಯೂರು

ಕನ್ನಡ ನಾಡು-ನುಡಿ, ನೆಲ-ಜಲ, ಸಂಸ್ಕೃತಿ ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯ ಎಂದು ಮಾಜಿ ಸಚಿವ ಎಚ್.ಆಂಜನೇಯ ಹೇಳಿದರು

ನಗರದ ವೇದಾವತಿ ಬಡಾವಣೆಯ ಕೃಷ್ಣಪ್ಪ ಸರ್ಕಲ್‌ನಲ್ಲಿ ಶನಿವಾರ ಕೆಚ್ಚೆದೆಯ ಕನ್ನಡಿಗರ ಯುವಕ ಸಂಘದ ನೇತೃತ್ವದಲ್ಲಿ ಆಯೋಜಿಸಿದ್ದ ಭೀಮೋತ್ಸವ ಹಾಗೂ ಕನ್ನಡದ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನ್ನಡ ನಾಡಿಗಾಗಿ ಶ್ರಮಿಸಿದ ಶ್ರೇಷ್ಠ ಕವಿ ಹಾಗೂ ಮಹಾಮಾನವತಾವಾದಿ ಕುವೆಂಪು, ಬಸವಣ್ಣ, ಅಂಬೇಡ್ಕರ್, ಕನಕದಾಸರು ಮುಂತಾದ ದಾರ್ಶನಿಕರ ತತ್ವಾದರ್ಶಗಳನ್ನು ತಿಳಿದುಕೊಳ್ಳುವುದರ ಜತೆಗೆ ಜೀವನದಲ್ಲಿ ಪಾಲಿಸುವ ಮೂಲಕ ನೆಮ್ಮದಿಯ ಜೀವನ ಕಟ್ಟಿಕೊಳ್ಳಬೇಕು ಎಂದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮಾತನಾಡಿ ಕಣ್ಣಿಗೆ ಕಾಣುವ ಮೊದಲ



ದೇವರು ತಂದೆ-ತಾಯಿ, ಎರಡನೇ ದೇವರು ಅಕ್ಷರ ಕಲಿಸಿದ ಗುರುಗಳಾದರೆ, ಮೂರನೇ ದೇವರು ಸಂವಿಧಾನ ಶಿಲ್ಪಿ ಅಂಬೇಡ್ಕರ್. ಪ್ರಸ್ತುತ ದೇಶದಲ್ಲಿ ಸಂವಿಧಾನಕ್ಕೆ ಆಪತ್ತು ಒದಗಿ ಬಂದಿದ್ದು, ಅದನ್ನು ರಕ್ಷಿಸುವ ಜಾತ್ಯಾತೀತ ಸರಕಾರವನ್ನ ಜಾರಿಗೆ ತರಬೇಕಾದ ಅವಶ್ಯಕತೆ ಇದೆ ಎಂದರು.

ಐಮಂಗಳ ಗುರುಪೀಠದ ಹರಳಯ್ಯ ಸ್ವಾಮೀಜಿ ಮಾತನಾಡಿ ರಾಮ ಮಂದಿರ ಕಟ್ಟುವುದಕ್ಕೆ ಅವಕಾಶ ಸಿಕ್ಕಿರುವುದು ಅಂಬೇಡ್ಕರ್ ಸಂವಿಧಾನದಿಂದ. ಆದ್ದರಿಂದ ಅಲ್ಲಿ ಅಂಬೇಡ್ಕರ್ ಪೋಟೋ ಹಾಕಬೇಕು. ಗ್ರಂಥಾಲಯ ಸ್ಥಾಪನೆ ಮಾಡಬೇಕು. ಎಲ್ಲಾ ದೇವಸ್ಥಾನದಲ್ಲಿ ಅಂಬೇಡ್ಕರ್ ಪೋಟೋ ಇರುವಂತೆ ರಾಷ್ಟ್ರಪತಿ ಆದೇಶ ನೀಡಬೇಕು. ಸಂವಿಧಾನ ಸರಿಯಾಗಿ ಪಾಲನೆಯಾಗಿದ್ದರೆ, ಮೀಸಲಾತಿ ಬೇಕಾಗಿರಲಿಲ್ಲ. ಬಡತನ ನಿರ್ಮೂಲನೆ ಆಗಿದ್ದರೆ ಮೀಸಲಾತಿ ಕೇಳುತ್ತಿರಲಿಲ್ಲ. ಇದ್ಯಾವುದು ಇಲ್ಲವಾದರಿಂದಲೇ ಮೀಸಲಾತಿ ಬೇಕಾಗಿದೆ. ಆದರೆ ಇಂದು ಈ ಮೀಸಲಾತಿ ಸೌಲಭ್ಯ ಪಡೆದವರೂ ಕೂಡಾ ಅಂಬೇಡ್ಕರ್ ಅವರನ್ನು ಸ್ಮರಿಸದಿರುವುದು ದುರದೃಷ್ಟಕರ ಸಂಗತಿ ಎಂದರು.

ಈಸಂದರ್ಭದಲ್ಲಿಅಂಬೇಡ್ಕರ್‌ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಬಿ.ಪಿ.ತಿಪ್ಪೇಸ್ವಾಮಿ, ಸಾಮಾಜಿಕ ಹೋರಾಟಗಾರ ಕೊಟ್ಟ ಶಂಕರ್, ಕೋಡಿಹಳ್ಳಿ ಸಂತೋಷ್, ನಗರಸಭೆ ಸದಸ್ಯ ಜಿ.ಎಸ್.ತಿಪ್ಪೇಸ್ವಾಮಿ ಮಾತನಾಡಿದರು. ಕೆಪಿಸಿಸಿ ಸದಸ್ಯ ಕಂದಿಕೆರೆ ಸುರೇಶ್ ಬಾಬು, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಈರಲಿಂಗೇಗೌಡ, ನಗರಸಭೆ ಸದಸ್ಯರಾದ ಶಿವರಂಜಿನಿ, ಚಿತ್ರಜಿತ್ ಯಾದವ, ಸಂಘಟನೆ ಅಧ್ಯಕ್ಷ ಪ್ರಸನ್ನ, ಪ್ರದೀಪ್, ಸಂದೀಪ್, ಕರವೇ ಅಧ್ಯಕ್ಷ ಕೃಷ್ಣ ಪೂಜಾರಿ, ಹಿರಿಯ ಮುಖಂಡ ಕೆಂಜೆಡಿಯಪ್ಪ, ಹುಚ್ಚವನಳ್ಳಿ ವೆಂಕಟೇಶ್, ಜಗನ್ನಾಥ್, ಎಚ್.ಓ.ತಿಪ್ಪೇಸ್ವಾಮಿ, ಇಂದ್ರಮ್ಮ, ತಿಪ್ಪಮ್ಮ, ಇತರರಿದ್ದರು.

## ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ದಗ್ಗೆಯಲ್ಲಿ ಮನೆ ಮನೆಗೆ ಮಂತ್ರಾಕ್ಷತೆ ವಿತರಣೆ





» ಚಿತ್ರದುರ್ಗ

ಉತ್ತರಪ್ರದೇಶದ ಅಯೋಧ್ಯೆಯಲ್ಲಿ ಮರ್ಯಾದ ಪುರುಷ ಶ್ರೀರಾಮನ ಜನ್ಮಸ್ಥಳದಲ್ಲಿ ರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ ಅಂಗವಾಗಿ ಹೊಳಲ್ಕೆರೆ ತಾಲ್ಲೂಕು ಬ್ರಹ್ಮಪುರ(ದಗ್ಗೆ) ಯಲ್ಲಿ ಮನೆ ಮನೆಗೆ ಮಂತ್ರಾಕ್ಷತೆಯನ್ನು ವಿತರಿಸಿ ಜ.22 ರಂದು ಉತ್ತರ ದಿಕ್ಕಿನಲ್ಲಿ ಐದು ದೀಪಗಳನ್ನು ಹಚ್ಚಿ ಶ್ರೀರಾಮನನ್ನು ಪೂಜಿಸುವಂತೆ ಮನವಿ ಮಾಡಲಾಯಿತು.

ಬ್ರಹ್ಮಪುರದಲ್ಲಿರುವ ಬಸವೇಶ್ವರಸ್ವಾಮಿ ದೇವಸ್ಥಾನದಲ್ಲಿ ಮೊದಲು ಪೂಜೆ ಸಲ್ಲಿಸಿದ ನಂತರ ಪ್ರತಿ ಮನೆಗೆ ಮಂತ್ರಾಕ್ಷತೆಯನ್ನು ವಿತರಿಸಲಾಯಿತು.

ಹಿಂದೂಗಳ ಆರಾಧ್ಯ ದೈವ ರಾಮ ಮಂದಿರ ನಿರ್ಮಾಣಕ್ಕಾಗಿ ಈ ಹಿಂದೆ ಅಯೋಧ್ಯೆಯಲ್ಲಿ ಕರ ಸೇವೆ ಸಲ್ಲಿಸಿದವರನ್ನು ಈ ಶುಭ ಸಂದರ್ಭದಲ್ಲಿ ಕಡ್ಡಾಯವಾಗಿ ಎಲ್ಲರೂ ಸ್ಮರಿಸಲೇಬೇಕು. ಶ್ರೀರಾಮ ಪ್ರಾಣ ಪ್ರತಿಷ್ಠಾಪನೆಯಲ್ಲಿ ಭಾಗವಹಿಸಲು ಆಗದಿದ್ದರೂ ಮನೆ ಮನೆಗೆ ತೆರಳಿ ಕರಪತ್ರ ಹಂಚುವ ಸೌಭಾಗ್ಯ ಸಿಕ್ಕಿರುವುದು ನಮ್ಮೆಲ್ಲರ ಪುಣ್ಯ. ಹಾಗಾಗಿ ಪ್ರಾಣ ಪ್ರತಿಷ್ಠಾಪನೆಯಂದು ಎಲ್ಲರೂ ಶ್ರೀರಾಮನನ್ನು ಜಪಿಸುವ ಮೂಲಕ ಭಕ್ತಿ ಸಮರ್ಪಿಸಬೇಕೆಂದು ಬಿಜೆಪಿ. ಜಿಲ್ಲಾ ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್ ಗ್ರಾಮಸ್ಥರಲ್ಲಿ ವಿನಂತಿಸಿದರು.

ಜ.22 ರಂದು ಪ್ರತಿ ಮಂಡಲಗಳ ಆಯಾ ದೇವಸ್ಥಾನಗಳಲ್ಲಿ ಸ್ವಚ್ಚತೆ ಕೈಗೊಳ್ಳುವ ಮೂಲಕ ಪ್ರಧಾನಿ ಮೋದಿರವರ ಕನಸಿಗೆ ಕೈಜೋಡಿಸುವಂತೆ ಮನವಿ ಮಾಡಿದ ದಗ್ಗೆಶಿವಪ್ರಕಾಶ್ ಇದೊಂದು ಅಭೂತಪೂರ್ವ ಸಂದರ್ಭವಾಗಿರುವುದರಿಂದ ಎಲ್ಲರೂ ಪ್ರಾಣ ಪ್ರತಿಷ್ಠಾಪನೆಯಂದು ದೀಪಗಳನ್ನು ಬೆಳಗಿ ಗೌರವಿಸಬೇಕೆಂದರು.

ಪ್ರಧಾನಿ ನರೇಂದ್ರಮೋದಿಯಂತಹ ಭಕ್ತನನ್ನು ಸ್ವತಃ ರಾಮನೇ ಅಯೋಧ್ಯೆಯಲ್ಲಿ ದೇವಸ್ಥಾನದ ಜೀರ್ಣೋದ್ದಾರಕ್ಕಾಗಿ ಭೂಮಿಗೆ ಕಳಿಸಿದ್ದಾನೆ. ಪ್ರತಿಯೊಬ್ಬ ಭಾರತೀಯ ಪ್ರತಿನಿಧಿಯಾಗಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ನೆರವೇರಿಸಲಿದ್ದಾರೆಂದು ದಗ್ಗೆಶಿವಪ್ರಕಾಶ್ ಹೇಳಿದರು.

ಮಂತ್ರಾಕ್ಷತೆ ವಿತರಣೆ ಸಂದರ್ಭದಲ್ಲಿ ನಿವೃತ್ತ ಉಪನ್ಯಾಸಕ ಕುಬೇಂದ್ರಪ್ಪ ಹೆಚ್.ಎಂ.ಎಸ್.ಲೋಕೇಶ್ವರಪ್ಪ, ಮಿಲ್ರಿ ನಾಗರಾಜಪ್ಪ, ಯರಗುಂಟಪ್ಪ, ಸಿ.ತಿಪ್ಪೇಸ್ವಾಮಿ, ಚೇರ್ಮನ್ ರುದ್ರಪ್ಪ, ದಗ್ಗೆ ದೇವೇಂದ್ರಪ್ಪ, ಸಿದ್ದಲಿಂಗಪ್ಪ, ಭೈರೇಶ್, ಸುಧಮ್ಮ, ತಗಡೂರು ರಾಜಮ್ಮ, ಮೀನಾಕ್ಷಮ್ಮ, ತಳವಾರ್ ರಾಜಪ್ಪ, ತಗಡು ಗೌರಮ್ಮ, ಅಮೂಲ್ಯ ಸೇರಿದಂತೆ ಇನ್ನು ಅನೇಕರು ಉಪಸ್ಥಿತರಿದ್ದರು.

## ನವಯಾನ ಮುಂದಿನ ಹೆಜ್ಜೆಗಳ ನಿರ್ಧರಿಸುವ ಚಿಂತನ ಮಂಥನ ಕಾರ್ಯಕ್ರಮಕ್ಕೆ ಚಾಲನೆ




» ಚಿತ್ರದುರ್ಗ

ಅಸಮಾನತೆ, ಜಾತೀಯತೆ, ಅಸ್ಪೃಶ್ಯತೆಗೆ ಬುದ್ದನ ಪಂಚಶೀಲಗಳಲ್ಲಿ ಉತ್ತರಗಳನ್ನು ಕಂಡುಕೊಳ್ಳಬಹುದು ಎಂದು ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಪ್ರೊ.ಸಿ.ಕೆ.ಮಹೇಶ್ ಹೇಳಿದರು.

ನವಯಾನ ಬುದ್ದ ಧಮ್ಮ ಸಂಘ ಚಿತ್ರದುರ್ಗ ವತಿಯಿಂದ ಪತ್ರಕರ್ತರ ಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ನವಯಾನ ಮುಂದಿನ ಹೆಜ್ಜೆಗಳ ನಿರ್ಧರಿಸುವ ಚಿಂತನ ಮಂಥನ ಕಾರ್ಯಕ್ರಮದಲ್ಲಿ ಬುದ್ದ, ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಬುದ್ದನ ಆಲೋಚನೆಗೆ ಡಾ.ಬಿ.ಆರ್.ಅಂಬೇಡ್ಕರ್ ಬೇರೆ ಬೇರೆ ಮೆರಗನ್ನು ಕೊಟ್ಟಿದ್ದಾರೆ. ಬುದ್ದನ ನವಯಾನ ಬೇರೆ ನವಯಾನಕ್ಕಿಂತ ಭಿನ್ನವಾದುದು. ಕುಡಿತ, ಕಳ್ಳತನ, ಸುಳ್ಳು ಹೇಳುವುದು, ಹಿಂಸೆ, ಅಸಮಾನತೆ ಇವುಗಳ ವಿರುದ್ದ ಬುದ್ದ ಮಾತನಾಡಿದ್ದಾನೆ. ಅಸ್ಪೃಶ್ಯತೆಯನ್ನು ಆಚರಿಸುವುದು, ಜಾತಿ ಅಸಮಾನತೆ, ವರ್ಗ ಅಸಮಾನತೆಯನ್ನು ವಿರೋಧಿಸುತ್ತಿದ್ದ ಬುದ್ದ ಯಜ್ಞ ಯಾಗಾದಿಗಳ ಹೆಸರಿನಲ್ಲಿ ವೈದ್ದಿಕ ಧರ್ಮದವರು ಪ್ರಾಣಿ ಹಿಂಸೆ ಮಾಡುತ್ತಿದ್ದುದನ್ನು ಬಲವಾಗಿ ಖಂಡಿಸುತ್ತಿದ್ದರು. ಅಹಿಂಸಾತ್ಮಕವಾದ ಜಗತ್ತನ್ನು ಬುದ್ದ ನೀಡಿದ್ದಾನೆ. ಮಾದಿಗ, ಒಲೆಯ ಜನಾಂಗದಲ್ಲಿ ಹುಟ್ಟಿರುವವರು ಬುದ್ದನ ಸಂದೇಶದಂತೆ ಅಹಿಂಸಾತ್ಮಕವಾಗಿದ್ದಾರೆಂದು ಹೆಮ್ಮೆಪಟ್ಟುಕೊಂಡರು.

ಶ್ರೇಷ್ಟಾತಿ ಶ್ರೇಷ್ಠ ವಿಚಾರಗಳನ್ನು ನವಯಾನ ಬುದ್ದ ಧಮ್ಮ ಕೊಟ್ಟಿದೆ. ದೇಶದಲ್ಲಿ ಬದಲಾವಣೆಯಾಗಬೇಕಾದರೆ ಬುದ್ದ ಧಮ್ಮ ಆಚರಣೆಗೆ ಬರಬೇಕು. ಮಾದಿಗ ಜಾತಿಯಲ್ಲಿ ಅಹಿಂಸಾತ್ಮಕ ಮಾನವೀಯ ಗುಣವಿದೆ. ಚಿಕ್ಕಮಗಳೂರಿನಲ್ಲಿ ದಲಿತ ಯುವಕ ದೇವಸ್ಥಾನ ಪ್ರವೇಶಿಸಿದ ಎನ್ನುವ ಕಾರಣಕ್ಕಾಗಿ ಥಳಿಸಲಾಗಿದೆ. ಅವಮಾನ, ತಿರಸ್ಕಾರ, ಜಾತಿಯತೆ, ಶೋಷಣೆ ಎಲ್ಲಿ ನಡೆಯುತ್ತದೋ ಅಂತಹ ಕಡೆ ಹೋಗಬೇಡಿ ಎಂದು ಅಂಬೇಡ್ಕರ್ ಹೇಳಿದ್ದಾರೆ. ಬುದ್ದ ಮಂದಿರವನ್ನು ಕಟ್ಟಿ ಹಿಂದೂ ಧರ್ಮದ ದೇವಾಲಯಗಳಿಗೆ ದೊಡ್ಡ ಸವಾಲಾಗಿ ನಿಂತು ಬ್ರಾಹ್ಮಣ್ಯವನ್ನು ಕಿತ್ತು ಹಾಕಬೇಕಿದೆ. ನಮಗಿರುವ ನೋವುಗಳಿಗೆ ಬುದ್ದನ ಪಂಚಶೀಲಗಳಲ್ಲಿ ಉತ್ತರಗಳನ್ನು ಕಂಡುಕೊಳ್ಳಬೇಕಿದೆ ಎಂದರು.ನಿವೃತ್ತ ತಹಶೀಲ್ದಾರ್ ಮಲ್ಲಿಕಾರ್ಜುನ್ ಮಾತನಾಡಿ ನವಯಾನ ಬುದ್ದ ಧಮ್ಮ ಆಚರಣೆಯಲ್ಲಿದೆಯೇ ವಿನಃ ಅನುಸರಣೆಯಲ್ಲಿಲ್ಲ. ಡಾ.ಬಿ.ಆರ್. ಅಂಬೇಡ್ಕರ್ ವಿಚಾರಧಾರೆ ಹಿನ್ನೆಲೆಯಲ್ಲಿ ನವಯಾನ ಬುದ್ದ ಧಮ್ಮ ಸಾಮಾಜಿಕರಣಗೊಳ್ಳಬೇಕಿದೆ ಎಂದು ಹೇಳಿದರು.

ಲೇಖಕ ಹೆಚ್.ಆನಂದ್‌ಕುಮಾರ್ ಮಾತನಾಡುತ್ತ, ಎಲ್ಲಾ ಜಾತಿ ಧರ್ಮದವರು ಸಮಾನವಾಗಿ ಬಾಳುವ ಹಕ್ಕನ್ನು ಸಂವಿಧಾನ ನೀಡಿದೆ. ಅಂಬೇಡ್ಕರ್ ದೃಷ್ಟಿಕೋನದಲ್ಲಿ ನವಯಾನ ಬುದ್ದ ಧಮ್ಮವನ್ನು ಆಚರಿಸುವ ಮೂಲಕ ಸಮ ಸಮಾಜ ನಿರ್ಮಾಣ ಮಾಡಿ ವಿಚಾರ, ವಿಶಾಲತೆಗೆ ಒಳಗಾಗಿ ಸದೃಢತೆಯನ್ನು ಗಳಿಸಿಕೊಳ್ಳಬಹುದು ಎಂದು ತಿಳಿಸಿದರು.;ಡಾ.ವಿ.ಬಸವರಾಜ್, ಡಿ.ದುರುಗೇಶಪ್ಪ, ಚಿಕ್ಕಣ್ಣ ವೇದಿಕೆಯಲ್ಲಿದ್ದರು.ಕೆ.ಕುಮಾರ್, ರಾಮು ಭಾಗವಹಿಸಿದ್ದರು.

## ತಾಳ್ಯದಲ್ಲಿ ನಡೆದ ಆರೋಗ್ಯ ತಪಾಸಣಾ ಶಿಬಿರಕ್ಕೆ ಹಾಲಮ್ಮ ಚಾಲನೆ

» ಹೊಳಲ್ಕೆರೆ

ತಾಲೂಕಿನ ಗ್ರಾಮೀಣ ಪ್ರದೇಶದ ಜನರ ಆರೋಗ್ಯ ಕಾಪಾಡಲು ಹಳ್ಳಿಹಳ್ಳಿಗಳಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಕೈಗೊಳ್ಳಲಾಗುತ್ತದೆ ಎಂದು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್.ಆರ್.ಮೋಹನ್ ನಾಗರಾಜ್ ತಿಳಿಸಿದರು.

ಅವರು ತಾಲೂಕಿನ ತಾಳ್ಯ ಗ್ರಾಮದ ಸರ್ಕಾರಿ ಆರೋಗ್ಯ ಚಿಕಿತ್ಸಾ ಕೇಂದ್ರದಲ್ಲಿ ಶನಿವಾರ ಲಯನ್ಸ್ ಕ್ಲಬ್, ಕೆ.ಎಸ್ ಹೆಗಡೆ ಆಸ್ಪತ್ರೆ ಮಂಗಳೂರು, ತಾಳ್ಯ ಗ್ರಾಮ ಪಂಚಾಯಿತಿ, ಈಶ್ವರಿ ವಿಶ್ವವಿದ್ಯಾನಿಲಯ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ,




ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ಜನರ ಆರೋಗ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಉಚಿತವಾಗಿ ಆರೋಗ್ಯ ತಪಾಸಣಾ ಶಿಬಿರವನ್ನು ಕೈಗೊಳ್ಳಲಾಗಿದೆ. ಮಂಗಳೂರಿನ ಕೆಎಸ್ ಹೆಗಡೆ ಆಸ್ಪತ್ರೆ ವತಿಯಿಂದ ಎಂಟು ಜನ ತಜ್ಞಾ ವೈದ್ಯರು ಆಗಮಿಸಿದ್ದಾರೆ. ಸುಮಾರು ಎರಡು ಲಕ್ಷ ಮೌಲ್ಯದ ಔಷಧೋಪಚಾರಗಳನ್ನು ಇಲ್ಲಿನ ಜನರಿಗೆ ಉಚಿತವಾಗಿ ನೀಡಲಾಗುತ್ತಿದೆ. ಆರೋಗ್ಯ ತಪಾಸಣೆಯಲ್ಲಿ ಕೀಲು ಮೂಳೆ ತಜ್ಞರಾದ ಡಾ.ವರುಣ್, ವೈದ್ಯಕೀಯ ತಜ್ಞರಾದ ಡಾ.ರಾಮ್ ಮೋಹನ್ ಭಂಡಾರಿ, ಚರ್ಮರೋಗ ತಜ್ಞರಾದ ಡಾ.ರೇಷ್ಮಾ ವಿ ಶೆಟ್ಟಿ, ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ಜ.28ಕ್ಕೆ ಶೋಷಿತ ಸಮಾಜದ ರಾಜ್ಯಮಟ್ಟದ ಸಮಾವೇಶ

» ಚಳ್ಳಕೆರೆ

ರಾಜ್ಯದ ಶೋಷಿತ ಸಮಾಜವನ್ನು ಅಭಿವೃದ್ಧಿ ಪಥದತ್ತ ತೆಗೆದುಕೊಂಡು ಹೋಗುವ ನಿಟ್ಟಿನಲ್ಲಿ ಶೋಷಿತ ಸಂಘಟನೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಪ್ರವಾಸ ಮಾಡಲಾಗುತ್ತಿದೆ.

ಜ.28ರ ಭಾನುವಾರ ಚಿತ್ರದುರ್ಗ ನಗರದಲ್ಲಿ ರಾಜ್ಯಮಟ್ಟದ ಶೋಷಿತ ಸಮುದಾಯದ ಬೃಹತ್ ಸಮಾವೇಶವನ್ನು ಹಮ್ಮಿಕೊಂಡಿದ್ದು, ಎಲ್ಲಾ ಶೋಷಿತ ಸಮುದಾಯ ಸಮಾವೇಶದಲ್ಲಿ ಪಾಲ್ಗೊಳ್ಳುವಂತೆ ಜಿಲ್ಲಾ ಸಂಚಾಲಕ ಜಗದೀಶ್ ಮನವಿ ಮಾಡಿದರು.

ಅವರು, ಭಾನುವಾರ ನಗರದ ಯಾದವ ಹಾಸ್ಟೆಲ್ ಸಭಾಂಗಣದಲ್ಲಿ ಸಮಾವೇಶ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಗೆ ಚಾಲನೆ




ನೀಡಿ ಮಾತನಾಡಿದರು. ಈಗಾಗಲೇ ಜಿಲ್ಲೆಯಾದ್ಯಂತ ವಿವಿಧ ತಾಲ್ಲೂಕು ಕೇಂದ್ರಗಳಿಗೆ ಭೇಟಿ ನೀಡಿ ಶೋಷಿತ ಸಮುದಾಯವನ್ನು ಒಗ್ಗೂಡಿಸುವ ಕಾರ್ಯ ನಡೆಯುತ್ತಿದೆ. ಮುಂದಿನ ದಿನಗಳಲ್ಲಿ ಈ ಸಮುದಾಯ ಎಲ್ಲಾ ಕ್ಷೇತ್ರದಲ್ಲೂ ಹೆಚ್ಚು ಪ್ರಾತಿನಿತ್ಯ ಪಡೆಯಲು ನಾವೆಲ್ಲರೂ ಸಂಘಟಿತರಾಗಬೇಕು. ಚಳ್ಳಕೆರೆ ತಾಲ್ಲೂಕಿನಿಂದ ಸಾವಿರಾರು ಸಂಖ್ಯೆಯಲ್ಲಿ ಶೋಷಿತ ಸಮುದಾಯದವರು ರಾಜ್ಯಮಟ್ಟದ ಸಮಾವೇಶದಲ್ಲಿ ಭಾಗವಹಿಸುವಂತೆ ವಿನಂತಿಸಿದರು.

ಪೂರ್ವಭಾವಿ ಸಭೆಯಲ್ಲಿ ಮಾಜಿ ಅಧ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ, ಮಂಜಪ್ಪ, ಸಿಮುಲ್ ನಿರ್ದೇಶಕ ಸಿ.ವೀರಭದ್ರಬಾಬು, ರಾಜ್ಯ ಕುಶಲಕರ್ಮಿ ಅಧ್ಯಕ್ಷ ಆರ್.ಪ್ರಸನ್ನಕುಮಾರ್, ನೇತಾಜಿ ಪ್ರಸನ್ನ, ಜಿಲ್ಲಾ ಉಪ್ಪಾರ ಸಂಘ ಅಧ್ಯಕ್ಷ ಮೂರ್ತಿ,ತಾಲ್ಲೂಕು ಅಧ್ಯಕ್ಷ ಹನುಮಂತಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಜಿ.ಟಿ.ಶಶಿಧರ, ದೊಡ್ಡರಂಗಪ್ಪ, ಎಸ್.ಎಚ್.ಸೈಯದ್, ಎಸ್.ಮುಜೀಬ್, ಟಿಪ್ಪುಖಾಸಿಂವಲಿ, ಕಂದಿಕೆರೆಸ ೨ರೇಶ್‌ಬಾಬು, ವೆಂಕಟೇಶ್‌ಚಾರ್, ಎಚ್.ಆಂಜನೇಯ ಮುಂತಾದವರು ಪಾಲ್ಗೊಂಡಿದ್ದರು.



# ಸಂಕ್ರಾಂತಿ





ರೂಪಾಂತರಿ ವೈರಸ್‌ಗಳು ಮನುಷ್ಯ ಜನಾಂಗವನ್ನು ಇನ್ನಿಲ್ಲದಂತೆ ಕಾಡುತ್ತಿರುವಾಗ, ಮಾಧ್ಯಮಗಳು ಅದಕ್ಕಿಂತ ಹೆಚ್ಚು ಬಾಲಿಶ ಸುದ್ದಿಗಳನ್ನು ಪ್ರಸಾರ ಮಾಡುತ್ತಿರುವಾಗ, ರಾಜಕಾರಣಿಗಳು ಅದಕ್ಕೂ ಮೀರಿ ಭ್ರಷ್ಟರಾಗುತ್ತಿರುವಾಗ, ಉದ್ಯಮಿಗಳು ಎಲ್ಲವನ್ನೂ ಮೀರಿ ಹಣದಾಹಿಗಳಾಗುತ್ತಿರುವಾಗ ಸಾಮಾನ್ಯ ಜನರ ಪಾಲಿಗೆ ಬದುಕುವುದೇ ಒಂದು ಸಾಧನೆಯಾಗಿ ಜೀವ ಜೀವನದ ಆಯ್ಕೆಯ ಗೊಂದಲದಲ್ಲಿರುವಾಗ.......

ಹೊಸ ವರುವಷ ಮೊದಲ ಹಬ್ಬ ನಮ್ಮ ಬಾಗಿಲ ಬಳಿ ನಿಂತಿದೆ.

ಈ ಸಂದರ್ಭದಲ್ಲಿ..........

ಆಗಲಿ ಮನಸುಗಳ ಕ್ರಾಂತಿ,
ಭಾರತೀಯತೆ – ಮಾನವೀಯತೆಯ ಕ್ರಾಂತಿ,
ತೊಲಗಲಿ ಮೌಢ್ಯಗಳ ಭ್ರಾಂತಿ,
ತುಡಿಯಲಿ ಸಹಜೀವಿಗಳೆಡಗೆ ಶಾಂತಿ,
ಮುಗಿಲೆತ್ತರಕ್ಕೇರಲಿ ಚಿಂತನೆಯ ಕ್ರಾಂತಿ,
ಪಾತಾಳಕ್ಕಿಳಿಯಲಿ ಕಲ್ಮಶದ ಭ್ರಾಂತಿ.

ಹಬ್ಬದ ಸಂಭ್ರಮಗಳು ನಮ್ಮ ಮೈ ಮನಸ್ಸಿಗೆ ವಿಶ್ರಾಂತಿ ನೀಡಲಿ, ನಮ್ಮ ಆತ್ಮಾವಲೋಕನಕ್ಕೆ ಸಮಯಾವಕಾಶ ಕಲ್ಪಿಸಲಿ,

ಯೋಚಿಸೋಣ – ಮತ್ತೆ ಮತ್ತೆ,
ಸರಿ ತಪ್ಪುಗಳ ವಿಮರ್ಶೆಗೆ ಒಳಪಡೋಣ,

ಇತಿಹಾಸದ ಬೆಳಕಲ್ಲಿ ವರ್ತಮಾನದ ಕತ್ತಲನ್ನು ಓಡಿಸೋಣ, ನಮ್ಮ ನೋವು ಯಾತನೆಗಳನ್ನು ಕಡಿಮೆ ಮಾಡಿಕೊಳ್ಳೋಣ,

ನಮ್ಮ ಕಷ್ಟಗಳನ್ನು ಎದುರಿಸುವ ಛಲ ಬೆಳೆಸಿಕೊಳ್ಳೋಣ,

ನಮ್ಮ ನಂಬಿಕೆ ಏನೇ ಇರಲಿ,
ನಿಯತ್ತು ಮಾತ್ರ ಸೃಷ್ಟಿಗೇ ಇರಲಿ,

ಏಕೆಂದರೆ ಗಾಳಿ ನೀರು ಆಹಾರ ಮಲಿನವಾಗುತ್ತಿದೆ,

ಇತ್ತೀಚಿನ ಅಧ್ಯಯನದ ವರದಿ ಪ್ರಕಾರ,
ವಾಯುಮಾಲಿನ್ಯದಿಂದ ಭಾರತದಲ್ಲಿ ವರ್ಷಕ್ಕೆ 12 ಲಕ್ಷಕ್ಕೂ ಹೆಚ್ಚು ಜನ ಸಾಯುತ್ತಿದ್ದಾರೆ,
ನೀರಿನಿಂದ ಇನ್ನೆಷ್ಟು ಜನ ಸಾಯುತ್ತಿದ್ದಾರೋ,
ಕಲಬೆರಕೆ ಆಹಾರದಿಂದ ಮತ್ತೆಷ್ಟೋ ,
ಬಹುಶಃ ಯುದ್ದದಿಂದಲೂ ಇಷ್ಟು ಜನ ಸಾಯುವುದಿಲ್ಲವೇನೋ,

ಥೆ..ಇದೇನು ಹುಚ್ಚಾಟ ...ಆಸ್ಪತ್ರೆ – ಪೋಲೀಸ್ ಸ್ಟೇಷನ್ ಗಳ ಹೆಚ್ಚಾಟ, ಅಭಿವೃದಿ ಎಂದರೆ ಇದೇನೇ, ಆರೋಗ್ಯ ಮತ್ತು ವ್ಯಕ್ತಿತ್ವದ ವಿನಾಶವೇ,

ಬೇಡ, ಇದು ಬೇಡವೇ ಬೇಡ,
ಈ ಸಂಕ್ರಾಂತಿ – ಈ ಹಬ್ಬ ,

ಆಧುನಿಕ ಮನೋಭಾವದವರಿಗೆ ಮತ್ತೆ ಸೃಷ್ಟಿಯತ್ತ ಮುನ್ನಡೆಯುವ ಮನಸ್ಸಾಗಲಿ,

ಬದುಕು ಸುಖಮಯವಾಗಲಿ, ನಮ್ಮ ನಡೆ – ಪ್ರಕೃತಿಯ ಕಡೆಗೆ ಸಾಗಲಿ. ಆಗ ನೋಡಿ, ನಮ್ಮ ಬದುಕು ಈ ಆಧುನಿಕತೆಯ ಒತ್ತಡ ಮೀರಿ ನೆಮ್ಮದಿಯ ತಾಣವಾಗುವುದು ಖಚಿತ.

**********

ಹಾಗಲ ಕಾಯಿ – ಬೇವಿನ ಸೊಪ್ಪು ತಿಂದರೂ ನಿಮ್ಮ ಮನಸ್ಸು ಶುದ್ದವಾಗಿದ್ದರೆ, ನಿಮ್ಮ ಮಾತು ಮತ್ತು ನಡವಳಿಕೆ ಒಳ್ಳೆಯದೇ ಆಗಿರುತ್ತದೆ.

ಎಳ್ಳು ಬೆಲ್ಲ ಕಬ್ಬು ತಿಂದರೂ,
ನಿಮ್ಮ ಮನಸ್ಸು ಕೊಳಕಾಗಿದ್ದರೆ, ಸಂಕ್ರಾಂತಿ ಹಬ್ಬದ ದಿನವೂ ನಿಮ್ಮಿಂದ ಒಳ್ಳೆಯ ಮಾತುಗಳು ಬರಲಾರವು. ಅಕಸ್ಮಾತ್ತಾಗಿ ಬಂದರೂ ಅದು ಕೃತಕವಾಗಿರುತ್ತದೆ ಮತ್ತು ಒಳಗಿನ ಅಸೂಯೆ ಗುಣಕ್ಕೆ ಮುಖವಾಡ ತೊಡಿಸಿದಂತಿರುತ್ತದೆ.

ಸಂಕ್ರಾಂತಿ ಹಬ್ಬದ ಜನಪ್ರಿಯ ನುಡಿ
"ಎಳ್ಳು ಬೆಲ್ಲ ತಿಂದು ಒಳ್ಳೆಯ ಮಾತಾಡು" ಎಂಬುದು ದುಷ್ಟ ಮನಸ್ಸಿನ ಜನರಿಗೆ ಅವರ ವಿಕೃತಿಯನ್ನು ನೆನಪಿಸುವ ಸಾಂಕೇತಿಕ ಮಾತುಗಳು ಮಾತ್ರ. ಒಳ್ಳೆಯ ಮನಸ್ಸಿನವರಿಗೆ ಇದು ಅನ್ವಯಿಸುವುದೇ ಇಲ್ಲ.

ಏಕೆಂದರೆ ನಿಮ್ಮ ಆಲೋಚನೆಗಳ ಮೇಲೆ ನೀವು ನಿಯಂತ್ರಣ ಹೊಂದಿ ಸಮಷ್ಟಿ ಪ್ರಜ್ಞೆಯಿಂದ ಸದಾ ಕಾಲ ಯೋಚಿಸುವವರು ನೀವಾಗಿದ್ದರೆ – ನಾಗರಿಕ ಪ್ರಜ್ಞೆ ನಿಮ್ಮದಾಗಿದ್ದರೆ, ಸಂಕ್ರಾಂತಿ ಹಬ್ಬದ ಈ ಹಿತ ನುಡಿಗಳನ್ನು ನಿಮಗೆ ಹೇಳುವ ಅವಶ್ಯಕತೆ ಇರುವುದೇ ಇಲ್ಲ.

ಶತ ಶತಮಾನಗಳಿಂದ ಭಾರತೀಯ ಸಂಸ್ಕೃತಿಯಲ್ಲಿ ಸಂಕ್ರಾತಿಯನ್ನು ವಿವಿಧ ಹೆಸರುಗಳಲ್ಲಿ ಸೂರ್ಯನ ಪಥ ಸಂಚಲನ ಬದಲಾಯಿಸುವ – ಪ್ರಕೃತಿಯಲ್ಲಿ ಆಗುವ ಬದಲಾವಣೆಗಳನ್ನು ವೈಜ್ಞಾನಿಕವಾಗಿ ಗಮನಿಸಿ ಆಚರಿಸಲಾಗುತ್ತದೆ . ಅದು ತುಂಬಾ ಸಂತೋಷದ ವಿಷಯ.

ಆದರೆ ,

ಅದೇ ಮಾತನ್ನು ಅನೇಕ ಭಾರತೀಯರ ಮನಸ್ಸು ಮತ್ತು ಮಾತುಗಳ ವಿಷಯದಲ್ಲಿ ಹೇಳಲು ಸಾಧ್ಯವಿಲ್ಲ ಎಂದು ವಿಷಾದದಿಂದಲೇ ಹೇಳಬೇಕಾಗಿದೆ. ಈ ಕ್ಷಣದಲ್ಲಿ ನಮ್ಮ ರಾಜಕೀಯ ನಾಯಕರು ಅಧಿಕಾರಿಗಳು ಎಲ್ಲಾ ಧರ್ಮಗಳ ಧಾರ್ಮಿಕ ನಾಯಕರು, ಕೆಲವು ಸಂಘಟನೆಗಳ ಸಂಸ್ಥೆಗಳ ವಿಕೃತ ಮನಸ್ಸಿನ ಸ್ವಯಂ ಘೋಷಿತ ನಾಯಕರು ಅಷ್ಟೇ ಏಕೆ, ಮಾಧ್ಯಮಗಳು ಮತ್ತು ಠಳಿಚಿಟ ಟಜಜುಚಿ ದ ಕೆಲವು ಸಂಕುಚಿತ ಮನೋಭಾವದವರು ಎಷ್ಟೊಂದು ಅಸಹ್ಯಕರವಾಗಿ ವರ್ತಿಸುತ್ತಾರೆಂದರೆ ಅವರಿಗೆ ನೀವು ಜೇನನ್ನು ತಿನ್ನಿಸಿದರೂ ಅವರ ಮನಸ್ಸಿನಿಂದ ಒಳ್ಳೆಯ ಮಾತುಗಳು ಬರಲಾರದಷ್ಟು ಕೆಟ್ಟ ಪರಿಸ್ಥಿತಿಯಲ್ಲಿ ನಾವಿದ್ದೇವೆ. ನಾವು ಸೇವಿಸುವ ಆಹಾರಕ್ಕೂ ನಮ್ಮ ಮಾತು ಮನಸ್ಸು ಭಾವನೆಗಳಿಗೂ ಅಂತಹ ಗಾಢ ಸಂಬಂಧವೇನೂ ಇಲ್ಲ.

( ಸ್ವಲ್ಪ ಮಟ್ಟಿಗೆ ಇರಬಹುದೇನೋ ?) ನಾವು ಈ ಸಮಾಜವನ್ನು ಗ್ರಹಿಸಿರುವ ನಮ್ಮ ಅರಿವಿನಿಂದ ಮಾತ್ರ ನಾವು ಶುದ್ಧ ಮನಸ್ಥಿತಿಯವರಾಗಲು ಸಾಧ್ಯ. ಅಂತಹ ಸಾಧ್ಯತೆ ಈ ಸಂಕ್ರಾಂತಿಯ ಸಂಧರ್ಭದಲ್ಲಿ ಆಗಲಿ, ಹಬ್ಬದ ಸಾಂಕೇತಿಕತೆ ಮತ್ತು ಕೃತಕತೆಯನ್ನು ಮೀರಿ ನಾವು ನೀವು ಇನ್ನು ಮುಂದೆಯಾದರು ಸಾಧ್ಯವಾದಷ್ಟೂ ನಮ್ಮಲ್ಲಿರಬಹುದಾದ ವಿಕೃತ ಮನಸ್ಥಿತಿಯನ್ನು ನಿಯಂತ್ರಿಸಿಕೊಂಡು ಮುಖವಾಡ ಕಳಚಿ ನಿಜ ಸಭ್ಯತೆಯನ್ನು ಆಚರಣೆಗೆ ತರುವ ಸಂಕಲ್ಪದೊಂದಿಗೆ ಈ ಮಣ್ಣಿನ ಋಣವನ್ನು ಸ್ವಲ್ಪವಾದರೂ ತೀರಿಸೋಣ ಎಂಬ ಆಶಯದೊಂದಿಗೆ.........

ಎಲ್ಲರಿಗೂ ಸಂಕ್ರಾಂತಿ ಹಬ್ಬದ ಶುಭಾಶಯಗಳು.ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ. ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T